ವಿಜಯಪುರ | ಸಂಪುಟ 01 | ಸಂಚಿಕೆ 256 | ಪುಟ 4 | ₹ 3.00
https://udayarashminews.com
udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ


ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಮಂಗಳವಾರ, ಡಿಸೆಂಬರ್ 05, 2023

“ಪ್ರಧಾನಿ ಮೋದಿ ಅವರ ಜನಪರ ಆಡಳಿತವನ್ನು ಇಡೀ ದೇಶವೇ ಮೆಚ್ಚಿದೆ ಎನ್ನುವುದಕ್ಕೆ ಬಿಜೆಪಿ ಪಕ್ಷವು 3 ರಾಜ್ಯಗಳಲ್ಲಿ ಭರ್ಜರಿ ಜಯ ದಾಖಲಿಸಿರುವುದೇ ಸಾಕ್ಷಿಯಾಗಿದೆ. ಈ ಫಲಿತಾಂಶವು ಮುಂಬರುವ ಲೋಕಸಭೆ ಚುನಾವಣೆಗೆ ದಿಕ್ಸೂಚಿ ಯಾಗಿದೆ.

– ಡಾ.ಗೌತಮ್ ಆರ್ ಚೌಧರಿ

ಬಿಜೆಪಿ ಮುಖಂಡರು ಹಾಗೂ ಮೀನುಗಾರರ ಸಂಘದ ರಾಷ್ಟ್ರೀಯ ಉಪಾಧ್ಯಕ್ಷರು




ವಿಜಯಪುರದ ರಾಜಗುರು ಇಂಡಸ್ಟ್ರೀಜ್ ಗೋದಾಮು । ನೂರಾರು ಮೂಟೆಗಳಡಿ ಸಿಲುಕಿದ ಬೀಹಾರ ಮೂಲದ ಕಾರ್ಮಿಕರು

# ಪ್ರಾಣಾಪಾಯದಲ್ಲಿ ಸಿಲುಕಿದ 10ಕ್ಕೂ ಅಧಿಕ ಕಾರ್ಮಿಕರು

ವಿಜಯಪುರ: ಮೆಕ್ಕೆಜೋಳಗಳನ್ನು ತುಂಬಿಡಲಾಗಿದ್ದ ಗೋಣಿ ಚೀಲಗಳು ಕುಸಿದ ಪರಿಣಾಮ ಸುಮಾರು ಹತ್ತಾರು ಜನರು ಸಿಲುಕಿಕೊಂಡಿರುವ ಘಟನೆ ಗುಮ್ಮಟ ನಗರಿ ವಿಜಯಪುರ ನಗರದ ಹೊರವಲಯದಲ್ಲಿರುವ ಕೆ ಐ ಡಿ ಬಿ ವಸಾಹತು ಪ್ರದೇಶದಲ್ಲಿ ನಡೆದಿದೆ.

ಖ್ಯಾತ ರಾಜಗುರು ಇಂಡಸ್ಟ್ರೀಜ್ ಗೋದಾಮಿನಲ್ಲಿ ಈ ಘಟನೆ ನಡೆದಿದ್ದು, ಸುಮಾರು 10ಕ್ಕೂ ಹೆಚ್ಚು ಜನ ಸಿಲುಕಿದ್ದಾರೆ ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ.

ರಾಜಗುರು ಫುಡ್ ಪ್ರೊಸೆಸಿಂಗ್ ಯುನಿಟ್ ನಲ್ಲಿ ಈ ಘಟನೆ ನಡೆದಿದೆ. ಇಲ್ಲಿ ಸಂಗ್ರಹಿಸಿ ಇಡಲಾಗಿದ್ದ ಮೆಕ್ಕೆಜೋಳದ ಚೀಲಗಳ ಮೇಲೆ ಬೃಹತ್ ಯಂತ್ರ ಬಿದ್ದಿದೆ. ಆಗ ಈ ಚೀಲಗಳು ಕುಸಿದು ಬಿದ್ದ ಪರಿಣಾಮ ಅಲ್ಲಿ ಕೆಲಸ ಮಾಡುತ್ತಿದ್ದ ಬಿಹಾರ ಮೂಲದ ಕಾರ್ಮಿಕರು ಅದರ ಕೆಳಗಡೆ ಸಿಲುಕಿದ್ದಾರೆ.

ಕಳೆದ ಹಲವು ವರ್ಷಗಳಿಂದ ಈ ಇಂಡಸ್ಟ್ರೀಜ್ ನಲ್ಲಿ ನಾನಾ ಕಡೆಗಳಿಂದ ಆಗಮಿಸಿರುವ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಸಂಜೆ ವೇಳೆ ಏಕಾಏಕಿ ನಡೆದ ಘಟನೆಯಿಂದಾಗಿ ಈ ಪ್ರದೇಶದಲ್ಲಿ ಆತಂಕದ ವಾತಾವರಣ ಉಂಟಾಗಿದೆ. ಘಟನೆಯ ಬಳಿಕ ನಾಲ್ಕು ಜೆಸಿಬಿ ಗಳಿಂದ ಮೆಕ್ಕೆಜೋಳವನ್ನು ಪಕ್ಕಕ್ಕೆ ಸರಿಸಿ ಕಾರ್ಮಿಕರ ರಕ್ಷಣಾ ಕಾರ್ಯ ನಡೆಯುತ್ತಿದೆ.



## ಬೆಳಗಾವಿಯಿಂದ ದೌಡಾಯಿಸುತ್ತಿರುವ ಸಚಿವ ಎಂ.ಬಿ.ಪಾಟೀಲ

ವಿಜಯಪುರ: ಕೆಐಡಿಬಿ ರಾಜಗುರು ಗೋಧಾಮಿನಲ್ಲಿ ಕಾರ್ಮಿಕರು ಸಿಲುಕಿದ ಘಟನೆಗೆ ಸಂಬಂಧಿಸಿದಂತೆ ಕೈಗಾರಿಕೆ ಹಾಗೂ ಮೂಲಸೌಕರ್ಯ ಸಚಿವ ಮತ್ತು ವಿಜಯಪುರ ಜಿಲ್ಲೆ ಉಸ್ತುವಾರಿ ಸಚಿವ ಎಂ. ಬಿ.ಪಾಟೀಲ್ ಬೆಳಗಾವಿಯಿಂದ ವಿಜಯಪುರದತ್ತ ಆಗಮಿಸುತ್ತಿದ್ದಾರೆ.

ಘಟನೆ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಮಾತನಾಡಿ ಮಾಹಿತಿ ಪಡೆದಿದ್ದು, ಮಾನ್ಯ ಮುಖ್ಯಮಂತ್ರಿಗಳು ಕೂಡ ಈ ಘಟನೆಯ ಮಾಹಿತಿ ನೀಡಿದ್ದಾರೆ.

ಈಗಾಗಲೇ ರಕ್ಷಣಾ ಕಾರ್ಯ ನಡೆದಿದ್ದು ಸ್ವತಹ ಜಿಲ್ಲಾ ಉಸ್ತುವಾರಿ ಸಚಿವರು ಘಟನೆ ಸ್ಥಳಕ್ಕೆ ಮಧ್ಯರಾತ್ರಿ 11:30 ಗಂಟೆಗೆ ಸಚಿವ ಎಂ.ಬಿ. ಪಾಟೀಲರು ಈ ಗೋಧಾಮಿಗೆ ಭೇಟಿ ನೀಡಿ ಪರಿಶೀಲಿಸಲಿದ್ದಾರೆ.

## ಮೂವರು ಕಾರ್ಮಿಕರ ರಕ್ಷಣೆ

ವಿಜಯಪುರ ನಗರದ ಹೊರವಲಯದಲ್ಲಿ ನಡೆದಿರುವ ಈ ಘಟನಾ ಸ್ಥಳಕ್ಕೆ ಎಸ್ಪಿ ಋಷಿಕೇಶ ಭಗವಾನ ಸೋನಾವಣೆ ಮತ್ತು ಪೊಲೀಸ್ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಈ ಮಧ್ಯೆ ಸ್ಥಳಕ್ಕೆ ದೌಡಾಯಿಸಿರುವ ಅಗ್ನಿಶಾಮಕ ದಳದ ಸಿಬ್ಬಂದಿಯೂ ರಕ್ಷಣಾ ಕಾರ್ಯಾಚರಣೆಯಲ್ಲಿ ನಿರತರಾಗಿದ್ದಾರೆ.

ಮೆಕ್ಕೆಜೋಳ ತುಂಬಿರುವ ಚೀಲಗಳು ಕುಸಿದಿರುವ ಸ್ಥಳದಲ್ಲಿ ಒಳಗಡೆ ಸಿಲುಕಿರುವ ಮೂರು ಜನರ ವಿಡಿಯೋ ಲಭ್ಯವಾಗಿದೆ.

ಈ ಮಧ್ಯೆ, ಅವಘಡ ಸಂಭವಿಸಿದ ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆ ಮುಂದುವರೆದಿದ್ದು, ಮೂವರು ಕಾರ್ಮಿಕರನ್ನು ರಕ್ಷಣೆ ಮಾಡಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಘಟನೆಯ ಕುರಿತು ಮಾಹಿತಿ ನೀಡಿರುವ ರಕ್ಷಣೆಗೊಳಗಾದ ಕಾರ್ಮಿಕ ರಂಜಾಮುತಿಯಾ, ಮೆಕ್ಕೆಜೋಳ ತುಂಬಿದ ಚೀಲಗಳು ಕುಸಿದ ಘಟನೆಯನ್ನು ಎಳೆ-ಎಳೆಯಾಗಿ ಬಿಚ್ಚಿಟ್ಟಿದ್ದಾನೆ. “ಪ್ರೊಸೆಸಿಂಗ್ ಯುನಿಟ್ ನಲ್ಲಿ ಕಾರ್ಮಿಕರು ಕೆಲಸ ಮಾಡುವಾಗ ಏಕಾಏಕಿ ಅವಘಡ ಸಂಭವಿಸಿತು. ಮೈಮೇಲೆ ಚೀಲಗಳು ಮತ್ತು ಮೆಕ್ಕೆಜೋಳದ ರಾಶಿಯೇ ಬಿತ್ತು. ಏನು ಮಾಡಬೇಕು ತೋಚಲಿಲ್ಲ. ಕುತ್ತಿಗೆಯವರೆಗೂ ಮೆಕ್ಕೆಜೋಳ ಬಂದಿತ್ತು. ಕೈಕಾಲು ಆಡಿಸಲು ಸಾಧ್ಯವಾಗಲಿಲ್ಲ. ಹೊರಗೆ ಬರಬೇಕೆಂದರೂ ಸಾಧ್ಯವಾಗಲಿಲ್ಲ. ಹೊರಗೆ ಉಳಿದಿದ್ದ ಕಾರ್ಮಿಕರು ಕೈ ಹಿಡಿದು ನನ್ನ ಜಗ್ಗಿ ಮೇಲಕ್ಕೆತ್ತಿ ಉಳಿಸಿದ್ದಾರೆ. ನನಗೆ ಕಾಲಿಗೆ ಹಾಗೂ ಸೊಂಟದ ಭಾಗಕ್ಕೆ ಗಾಯವಾಗಿದೆ. ದೇವರು ನನ್ನನ್ನು ಕಾಪಾಡಿದ್ದಾನೆ” ಎಂದು ಕಣ್ಣೀರಿಡುತ್ತಲೇ ನಡೆದ ಘಟನೆ ಮತ್ತು ತಾನು ಎದುರಿಸಿದ ಸಂಕಷ್ಟದ ಸಮಯವನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದ್ದಾರೆ.

ಈ ಘಟನೆ ನಡೆದ ಸಂದರ್ಭದಲ್ಲಿ ಸ್ಥಳದಲ್ಲಿಯೇ ಉಪಸ್ಥಿತರಿದ್ದ ಇತರ ಕಾರ್ಮಿಕರೂ ಕೂಡ ಘಟನೆಯ ಕುರಿತು ಮಾಹಿತಿ ನೀಡಿದ್ದಾರೆ.

ಈ ಅವಘಡದಲ್ಲಿ ಇನ್ನೂ ಎಷ್ಟು ಜನ ಸಿಲುಕಿಕೊಂಡಿದ್ದಾರೆ ಎಂಬುದರ ಕುರಿತು ಹೆಚ್ಚಿನ ಮಾಹಿತಿ ದೊರೆಯಬೇಕಿದೆ.

### ರಾಜ ನುಡಿ

ಸುರೂಪಿ ಚಿಟ್ಟೆಯಾಗಿ ಪ್ರಸಿದ್ಧಿ ಪಡೆಯೋಕೆ, ಕುರೂಪಿ ಕಂಬಳಿಹುಳು (caterpiller) ವಾಗಿ ಎಲ್ಲಾ ಕೆಲಸವನ್ನು ಶ್ರಮವಹಿಸಿ ಮುಂಚೆಯೇ ಮಾಡಿರಬೇಕು. ಶ್ರಮವೇ ಸುಂದರ.

–ಡಾ. ರಾಜಶೇಖರ ನಾಗೂರ

# ಪ್ರವಾಸೋದ್ಯಮ ಸಹಕಾರಕ್ಕೆ ಸಿದ್ಧ :ಸಚಿವ ಎಂ.ಬಿ.ಪಾಟೀಲ

ಉದಯರಶ್ಮಿ ನ್ಯೂಸ್

ವಿಜಯಪುರ: ಬಿ.ಎಲ್.ಡಿ.ಇ ಡಿಯು– ಡೆಕಾ ಲೇಸರ್ ಅಕ್ಯಾಡೆಮಿಯನ್ನು ಅಂತಾರಾಷ್ಟ್ರೀಯ ಸಂಸ್ಥೆಯನ್ನಾಗಿ ಮಾಡಲು ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ನಗರದ ಬಿ.ಎಲ್.ಡಿ.ಇ ಟ್ರಾಮಾ ಸೆಂಟರ್ ನಲ್ಲಿ ದೇಶದಲ್ಲಿಯೇ ಇದೇ ಮೊದಲ ಬಾರಿಗೆ ಬಿ.ಎಲ್.ಡಿ.ಇ ಡಿಯು– ಡೆಕಾ ಲೇಸರ್ ಅಕ್ಯಾಡೆಮಿ ಉದ್ಘಾಟಿಸಿ ಅವರು ಮಾತನಾಡಿದರು.

ಇಟಲಿ ಮೂಲದ ಡೆಕಾ ಲೇಸರ್ ಕಂಪನಿ ಮತ್ತು ಬಿ.ಎಲ್.ಡಿ.ಇ ಆಸ್ಪತ್ರೆಯ ಚರ್ಮರೋಗ ವಿಭಾಗದ ಸಹಯೋಗದಲ್ಲಿ ದೇಶದಲ್ಲಿಯೇ ಇದೇ ಮೊದಲ ಬಾರಿಗೆ ಈ ಅಕ್ಯಾಡೆಮಿ ಆರಂಭವಾಗಿದೆ. ಡಾ ಅರುಣ ಚಂ. ಇನಾಮದಾರ ಅವರು ಆರೋಗ್ಯ ಕ್ಷೇತ್ರದಲ್ಲಿ ವಿಜಯಪುರ ಜಿಲ್ಲೆಯ ಕೀರ್ತಿಯನ್ನು ವಿಶ್ವಕ್ಕೆ ಪಸರಿಸುವ ಕೆಲಸ ಮಾಡಿದ್ದಾರೆ. ಈ ಅಕ್ಯಾಡೆಮಿ ಸ್ಥಾಪನೆಯಿಂದ ಉಭಯ ದೇಶಗಳ ಮಧ್ಯೆ ಚರ್ಮರೋಗ ಮತ್ತು ಲೇಸರ್ ತಂತ್ರಜ್ಞಾನದ ಬಳಕೆಯ ಬಗ್ಗೆ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಹೊಸ ಸಂಶೋಧನೆಯ ಜೊತೆಗೆ ರೋಗಿಗಳಿಗೆ ಉಪಯುಕ್ತ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಸಾಕಷ್ಟು ಅನುಕೂಲವಾಗಲಿದೆ. ಇದರ ಕಾರ್ಯವ್ಯಾಪ್ತಿಯನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ವಿಸ್ತರಿಸಲು ಸಕಲ ನೆರವು ನೀಡಲಾಗುವುದು. ಅಗತ್ಯಕ್ಕೆ ತಕ್ಕಂತೆ ಕೈಗೊಳ್ಳಬೇಕಿರುವ ಕ್ರಮಗಳು, ಅಳವಡಿಸಬೇಕಿರುವ ತಂತ್ರಜ್ಞಾನಗಳನ್ನು ಹೊಂದಲು ಸಂಪೂರ್ಣ ಸ್ವಾತಂತ್ರ್ಯ ನೀಡಲಾಗಿದೆ. ಬಿ.ಎಲ್.ಡಿ.ಇ ಡೀಮ್ಡ್ ವಿವಿ ದೇಶದಲ್ಲಿ ಆರೋಗ್ಯ ಕ್ಷೇತ್ರದಲ್ಲಿರುವ ಪ್ರಮುಖ ಮತ್ತು ಮುಂಚೂಣಿ ವಿವಿಗಳಲ್ಲಿ ಒಂದಾಗಿದೆ. ಈ ಅಕ್ಯಾಡೆಮಿ ಸ್ಥಾಪನೆ ನಮ್ಮ ವಿವಿ ಹೊಸ ಮೈಲುಗಲ್ಲು ಸ್ಥಾಪಿಸಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಆರೋಗ್ಯ ಕ್ಷೇತ್ರದಲ್ಲಿ ಈಗ ಬಿ.ಎಲ್.ಡಿ.ಇ ಸಂಸ್ಥೆಯೊಂದಿಗೆ ಇಟಲಿಯ ಡೆಕಾ ಲೇಸರ್ ಕಂಪನಿ ಒಡಂಬಡಿಕೆ ಮಾಡಿಕೊಂಡಿದೆ. ಇದೇ ರೀತಿ ಪ್ರವಾಸಿ ತಾಣಗಳ ಕಣಜವಾಗಿರುವ ವಿಜಯಪುರ ಮತ್ತು ದೇಶದ ನಾನಾ ರಾಜ್ಯಗಳ ಪ್ರಾಚೀನ ಸ್ಮಾರಕಗಳು ಹಾಗೂ ಇನ್ನಿತರ ತಾಣಗಳಗಳ ಕುರಿತು ಒಪ್ಪಂದ ಮಾಡಿಕೊಂಡರೆ ಭಾರತ ಮತ್ತು ಇಟಲಿ ಎರಡೂ ದೇಶಗಳಲ್ಲಿ ಪ್ರವಾಸೋದ್ಯಮಕ್ಕೂ ಪ್ರೋತ್ಸಾಹ ನೀಡಿದಂತಾಗುತ್ತದೆ. ನೀವು ಇಟಲಿ ಸರಕಾರದ ಜೊತೆ ಈ ಕುರಿತು ಚರ್ಚಿಸಿ. ನಾನೂ ಕೂಡ ರಾಜ್ಯ ಮತ್ತು ಕೇಂದ್ರ ಸರಕಾರಗಳ ಜೊತೆ ಈ ಕುರಿತು ಮನವರಿಕೆ ಮಾಡಿಕೊಡುತ್ತೇನೆ. ಪ್ರಧಾನಿಗೂ ಈ ಕುರಿತು ಮಾಹಿತಿ ನೀಡುತ್ತೇನೆ. ಈ ಮೂಲಕ ಇನ್ನಿತರ ಕ್ಷೇತ್ರಗಳಲ್ಲೂ ವಿನಿಮಯ ನಡೆದರೆ ದೇಶದ ಜಿಡಿಪಿ ಅಭಿವೃದ್ಧಿಗೂ ಕೊಡುಗೆ ನೀಡಬಹುದು ಎಂದು ಎಂ. ಬಿ. ಪಾಟೀಲ ತಿಳಿಸಿದರು.



ಇಟಲಿಯ ಡೆಕಾ ಲೇಸರ್ ಕಂಪನಿಯ ಜನರಲ್ ಮ್ಯಾನೇಜರ್ ಪಾಲೊ ಸ್ಯಾಲ್ವೆನಿಯೊ ಮಾತನಾಡಿ, ಬೇರೆ ದೇಶಗಳಲ್ಲಿ ಇಂಥ ಒಡಂಬಡಿಕೆಗೆ ಬೇಡಿಕೆ ಬಂದಿದ್ದರೂ, ವಿಜಯಪುರದ ಬಿ.ಎಲ್.ಡಿ.ಇ ಸಂಸ್ಥೆ ಮತ್ತು ಡೀಮ್ಡ್ ವಿವಿ ಸಮಕುಲಪತಿ ಡಾ. ಅರುಣ ಚಂ. ಇನಾಮದಾರ ಅವರ ಸೇವಾಶ್ರದ್ಧೆ, ಸಂಶೋಧನೋತ್ಸಾಹ ಹಾಗೂ ಈ ಕೇತ್ರದ ಬಗ್ಗೆ ಅವರಿಗಿರುವ ನಿಜವಾದ ಕಳಕಳಿಗೆ ಮನಸೋತಿದ್ದೇನೆ. ಅಷ್ಟೇ ಅಲ್ಲ, ನಾನು ಭಾರತವನ್ನು ಹೆಚ್ಚಾಗಿ ಇಷ್ಟಪಡುತ್ತೇನೆ. ಇಲ್ಲಿನ ಸಂಶೋಧನೆ ಕ್ಷೇತ್ರದಲ್ಲಿ ಗುಣಾತ್ಮಕ ಸ್ಪರ್ಧೆ ನಡೆಯುತ್ತದೆ. ಹೀಗಾಗಿ ಈ ಒಪ್ಪಂದಕ್ಕೆ ಮಾಡಿಕೊಂಡಿದ್ದು, ಇದು ನನ್ನ ಜೀವನದಲ್ಲಿ ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿಯಾಗಿದೆ. ಮುಂಬರುವ ದಿನಗಳಲ್ಲಿ ಜಂಟಿಯಾಗಿ ಚರ್ಮರೋಗ ಕ್ಷೇತ್ರಕ್ಕೆ ಮತ್ತಷ್ಟು ಕೊಡುಗೆ ನೀಡಲು ಉತ್ಸುಕನಾಗಿದ್ದೇನೆ ಎಂದು ತಿಳಿಸಿದರು.

ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಕುಲಪತಿ ಡಾ. ಆರ್. ಎಸ್. ಮುಧೋಳ ಮಾತನಾಡಿ, ನಾವು ಸಮಾಜ ಮತ್ತು ಕೆಲಸ ಮಾಡುವ ಸಂಸ್ಥೆಗಗಳಿಗೆ ನೀಡುವ ಕೊಡುಗೆ ಅಜರಾಮರವಾಗಿರಬೇಕು. ಈ ಕೆಲಸವನ್ನು ಡಾ. ಅರುಣ ಚಂ. ಇನಾಮದಾರ ಮಾಡಿದ್ದಾರೆ. ವಿದ್ಯಾರ್ಥಿಗಳಿಗೆ ಕೌಶಲ್ಯಪೂರಿತ ತರಬೇತಿ ನೀಡಿ ರೋಗಿಗಳಿಗೆ ಉತ್ತಮ ಸೇವೆ ನೀಡುವುದು ನಮ್ಮ ಗುರಿಯಾಗಿದೆ. ಈ ಅಕ್ಯಾಡೆಮಿಯನ್ನು ಎಲ್ಲರೂ ತಮ್ಮದೆಂದು ತಿಳಿದು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು.


ಬಿ.ಎಲ್.ಡಿ.ಇ ಡೀಮ್ಡ್ ವಿವಿ ಸಮಕುಲಪತಿ ಡಾ. ಅರುಣ ಚಂ. ಇನಾಮದಾರ ಮಾತನಾಡಿ, ನನ್ನ ಕನಸು 30 ವರ್ಷಗಳ ಕನಸು ತಮ್ಮೆಲ್ಲರ ಸಹಕಾರದಿಂದ ಈ ಅಕ್ಯಾಡೆಮಿ ಸ್ಥಾಪಿಸುವ ಮೂಲಕ ನನಸಾಗುತ್ತಿದೆ. ಈ ಹಿಂದೆ ಸ್ಥಳೀಯವಾಗಿ ಆರಂಭವಾದ ಚರ್ಮರೋಗ ಕ್ಷೇತ್ರದ ಸೇವೆಯ ಪಯಣ ಈಗ ಅಂತಾರಾಷ್ಟ್ರೀಯ ಮಟ್ಟಕ್ಕೆ ತಲುಪಿದೆ. ಉತ್ತಮ ಭವಿಷ್ಯಕ್ಕಾಗಿ ಮತ್ತು ಬ್ರ್ಯಾಂಡ್ ಬಿ.ಎಲ್.ಡಿ.ಇ ಮಾಡಲು ಮುಂದಡಿ ಇಟ್ಟಿದ್ದೇವೆ. ಸೆಮಿನಾರ, ವರ್ಕಶಾಪ್, ಫೆಲೋಶಿಪ್ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಲೇಸರ್ ತಂತ್ರಜ್ಞಾನ ಸದ್ಬಳಕೆಯ ತರಬೇತಿ ಕೌಶಲ್ಯವನ್ನು ನೀಡುತ್ತೇವೆ. ದೇಶದ ಅತ್ಯುತ್ತಮ ಚರ್ಮರೋಗ ತಜ್ಞರು ಯಾವುದೇ ಫಲಾಪೇಕ್ಷೆ ಇಲ್ಲದೇ ಜನರಿಗಾಗಿ ಸೇವೆ ಮತ್ತು ಸಂಶೋಧನೆ ಮಾಡುತ್ತಿದ್ದಾರೆ. ಈ ಅಕ್ಯಾಡೆಮಿಯಿಂದ ಎಲ್ಲರ ಸಹಯೋಗದಲ್ಲಿ ಇಲ್ಲಿನ ವಿದ್ಯಾರ್ಥಿಗಳು ಇಟಲಿಗೂ ತೆರಳಿ ತರಬೇತಿ ಪಡೆಯಬಹುದಾಗಿದೆ. ಅಲ್ಲದೇ, ಇಟಲಿ ಮತ್ತು ಭಾರತದ ಮಧ್ಯೆ ಜ್ಞಾನ, ಸಂಶೋಧನೆಗಳು, ಆಧುನಿಕ ಸೌಲಭ್ಯಗಳ ವಿನಿಮಯವೂ ನಡೆಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇಶದ ನಾನಾ ಭಾಗಗಳಿಂದ ಆಗಮಿಸಿದ್ದ ಚರ್ಮರೋಗ ಖ್ಯಾತ ತಜ್ಞರನ್ನು ಸಚಿವ ಎಂ. ಬಿ. ಪಾಟೀಲ ಸನ್ಮಾನಿಸಿದರು.

ಈ ಕಾರ್ಯಕ್ರಮದಲ್ಲಿ ಬಿ. ಎಲ್. ಡಿ. ಡೀಮ್ಡ್ ವಿವಿಯ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ರಜಿಸ್ಟ್ರಾರ್ ಡಾ. ಆರ್. ವಿ. ಕುಲಕರ್ಣಿ, ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ ಹೊನ್ನುಟಗಿ, ಉಪಪ್ರಾಚಾರ್ಯ ಡಾ. ಎಂ. ಬಿ. ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಪ್ರಾಚಾರ್ಯ ಡಾ. ಅರವಿಂದ ಪಾಟೀಲ ಸ್ವಾಗತಿಸಿದರು. ಅಕಾಂಕ್ಷಾ ಸಾರವಾಡ ಪ್ರಾರ್ಥಿಸಿದರು. ಶ್ರುತಿ ಕುಲಕರ್ಣಿ ವಂದಿಸಿದರು.

### ವಚನ ಚಿಂತನ 247



ಇಷ್ಟಲಿಂಗ – ಕರಸ್ಥಲದ ಜ್ಯೋತಿ

*ಕರಸ್ಥಲದ ಜ್ಯೋತಿಯಿದು. ಕರುವಿಟ್ಟ ಎರಕವಿದು.*
*ಇದರ ನೆಲೆಯ ತಿಳಿದು ನೋಡಿದಡೆ ನಿಜದಾನಂದವು.*
*ಹೊಲಬುದೋರದ ನಿಸ್ಸಂಗದ ಹೊಲಬನರಿದು*
*ಕೂಡಿದಾತನೆ ಶರಣ ಕಾಣಾ! ರಾಮನಾಥ.*
*– ಜೇಡರ ದಾಸಿಮಯ್ಯನವರು*

ಕಲ್ಯಾಣ ಕ್ರಾಂತಿಯ ಸಂದರ್ಭದಲ್ಲಿ ನಾಶವಾದ ಅನೇಕ ವಚನಗಳಲ್ಲಿ ಇಷ್ಟಲಿಂಗ ತಯಾರಿಕೆಯ ಕುರಿತು ಬರೆದ ವಚನಗಳು ಸಹ ನಾಶಹೊಂದಿರುವ ಸಾಧ್ಯತೆಗಳಿವೆ. ಆದ್ಯ ವಚನಕಾರರಾದ ಜೇಡರ ದಾಸಿಮಯ್ಯನವರು ಈ ವಚನದಲ್ಲಿ ಇಷ್ಟಲಿಂಗವನ್ನು ಕರಸ್ಥಲದ ಜ್ಯೋತಿ ಎಂದು ಕರೆಯುತ್ತಾ, ಕರುವಿಟ್ಟ ಎರಕವಿದು ಎನ್ನುವಲ್ಲಿ ಇಷ್ಟಲಿಂಗಕ್ಕೆ ಬಳಸುವ ಕಂತೆಯ ಬಗ್ಗೆ ಸುಳುಹೂ ನೀಡಿದ್ದಾರೆ. ಕಂತೆಗೆ ಶಿಲಾರಸ(ಂಟಭಜಡಿ), ಇಂಗಳಿಕ(ಸಿಂಧೂರ–ಗಿಜಡಿಟುಟುಂಟಿ), ರಾಳ(ಖಘುಟಿ), ಅರಗು(ಜಚಿಟುಟಿಂ–ತಿಚಿಥ), ರುವಾಮಸ್ತಕಿ(ಒಚಿಥಿ–ಙುಥಿ)ಗಳನ್ನು ಬಳಸಲಾಗುತ್ತದೆ. ಇವೆಲ್ಲವುಗಳು ಕಣ್ಣಿನ ರೆಟಿನಾದಿಂದ ಬೆಳಕ(ಚೈತನ್ಯವ)ನ್ನು ಸ್ವೀಕರಿಸಲು ಪೂರಕ ಕಾರ್ಯನಿರ್ವಹಿಸುವಂತಹ ಪ್ರಕಾಶ ಸಂವೇದನಾಶೀಲ ವರ್ಣದ್ರವ್ಯಗಳು. ಇವೆಲ್ಲವುಗಳು ಲಿಂಗಕ್ಕೆ ಹೊಳಪು ನೀಡುತ್ತವೆ. ಆ ಕಾರಣಕ್ಕಾಗಿ ಇಲ್ಲಿ ಕರಸ್ಥಲದ ಜ್ಯೋತಿ ಎಂದಿರುವುದು. ಅಂತಹ ಲಿಂಗವನ್ನು ಅನಿಮಿಷ ದೃಷ್ಟಿಯಿಂದ ನಿರೀಕ್ಷಿಸಿದಾಗ ದೊರೆಯುವ ಆನಂದವನ್ನು ನಿಜದಾನಂದ (ಇದರ ನೆಲೆಯ ತಿಳಿದು ನೋಡಿದಡೆ ನಿಜದಾನಂದವು.) ಎಂದೆನ್ನುತ್ತಾ, ಅಂಗ ಲಿಂಗ ಭೇದ ಮರೆತು ಉಂಟಾಗುವ ಲಿಂಗಾನುಸಂಧಾನವನ್ನು ‘ಹೊಲಬುದೋರದ ನಿಸ್ಸಂಗದ ಹೊಲಬನರಿದು ಕೂಡುವವನೆ ಶರಣ.’ ಇಷ್ಟಲಿಂಗದಿಂದ ಶರಣತ್ವ ಪ್ರಾಪ್ತಿಯಾಗುತ್ತದೆ.


-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಔರಾದ್ಕರ ವರದಿ ಅನುಷ್ಠಾನಕ್ಕೆ ರೈತ ಸಂಘ ಆಗ್ರಹ

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಔರಾದ್ಕರ್ ವರದಿಯನ್ನು ಅನುಷ್ಠಾನಗೊಳಿಸಿ ರಾಜ್ಯದ ಆರಕ್ಷಕರ (ಪೊಲೀಸರ) ಪಿಂಚಣಿ ಹೆಚ್ಚಳ ಮಾಡುವಂತೆ ಆಗ್ರಹಿಸಿ ಇಂದು ಅಖಂಡ ಕರ್ನಾಟಕ ರೈತ ಸಂಘ ರಾಜ್ಯ ಘಟಕ ಬೆಂಗಳೂರು ವತಿಯಿಂದ ರಾಜ್ಯದ ಗೃಹ ಸಚಿವ ಡಾ.ಜಿ. ಪರಮೇಶ್ವರ ಹಾಗೂ ಪೊಲೀಸ್ ಮಹಾ ನಿರ್ದೇಶಕರು, ಬೆಂಗಳೂರು ಇವರಿಗೆ ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಲಾಯಿತು.


ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, ರಾಜ್ಯದ ಆರಕ್ಷಕರ (ಪೊಲೀಸರ) ಹಾಗೂ ಅವರ ಮೇಲಾಧಿಕಾರಿಗಳ ಮಾಸಿಕ ಪಿಂಚಣಿ ಹೆಚ್ಚಿಸಲು ಹಿಂದಿನ ನಿವೃತ್ತ ಪೊಲೀಸ್ ಮಹಾನಿರ್ದೇಶಕರಾಗಿದ್ದ ಔರಾದಕರ್ ವರದಿಯನ್ನು ಅನುಷ್ಠಾನಗೊಳಿಸಿ ರಾಜ್ಯದ ಪೊಲೀಸರಿಗೆ ಹಾಗೂ ಅವರ ಮೇಲಾಧಿಕಾರಿಗಳ ನೆರವಿಗೆ ಧಾವಿಸಬೇಕಿದೆ. ರಾಜ್ಯದ ವಿವಿಧ ಸರಕಾರಿ ನೌಕರಸ್ಥರಿಗೆ ಹಾಗೂ ಪೊಲೀಸ್ ಇಲಾಖೆಯವರ ಪಿಂಚಣಿಗೆ ಹೋಲಿಸಿದರೆ ಅಜಗಜಾಂತರ ವ್ಯತ್ಯಾಸವಿದೆ. ರಾಜ್ಯದ ಪೊಲೀಸ್ ಇಲಾಖೆಯವರಿಗೆ ಸರಕಾರ ಮಲತಾಯಿ ಧೋರಣೆ ಅನುಸರಿಸುತ್ತಿರುವ ರಾಜ್ಯದ ಪೊಲೀಸರು ಹಗಲು–ರಾತ್ರಿ ಎನ್ನದೇ ಮಳೆ,ಗಾಳಿ,ಚಳಿ ಎನ್ನದೇ ತಮ್ಮ ಜೀವದ ಹಂಗು ತೊರೆದು ಜನರನ್ನು ರಕ್ಷೆ ಮಾಡಲು ಮುಂದುಗುತ್ತಾರೆ. ಅಂತವರಿಗೆ ಸರಕಾರ ಪಿಂಚಣಿ ಹೆಚ್ಚಿಸಲು ಮೀನಾಮೇಷ ಮಾಡುತ್ತಿದೆ. ಅವರ ಗೋಳನ್ನು ಯಾರೂ ಕೇಳದಂತಾಗಿದೆ. ಪ್ರಸ್ತುತ ದಿನಗಳಲ್ಲಿ ಅಗತ್ಯವಸ್ತುಗಳ ಬೆಲೆ ಗಗನಕ್ಕೇರಿರುವದು ಹಾಗೂ ಮಕ್ಕಳ ಶಿಕ್ಷಣ ಇವೆಲ್ಲವುಗಳನ್ನು ನಿಭಾಯಿಸಲು ಕಷ್ಟವಾಗುತ್ತಿದೆ. ಆದ್ದರಿಂದ ಸರಕಾರ ಈಗಾಲಾದರೂ ಪೊಲೀಸರ ಸಂಕಷ್ಟವನ್ನು ಅರಿತುಕೊಂಡು ಔರಾದ್ಕರ ವರದಿಯನ್ನು ಅನುಷ್ಠಾನಗೊಳಿಸಬೇಕೆಂದು ಒತ್ತಾಯಿಸಿದರು.



ಈ ಸಂದರ್ಭದಲ್ಲಿ ಬಸವನ ಬಾಗೇವಾಡಿ ಗೌರವಾಧ್ಯಕ್ಷ ಈರಣ್ಣ ದೇವರಗುಡಿ, ತಾ.ಪ್ರಧಾನ ಕಾರ್ಯದರ್ಶಿ ಪ್ರಲ್ಹಾದ ನಾಗರಾಳ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸದಾಶಿವ ಬರಟಗಿ, ಬ.ಬಾಗೇವಾಡಿ ತಾಲೂಕ ಉಪಾಧ್ಯಕ್ಷರಾದ ಹೊನಕೇರಪ್ಪ ತೆಲಗಿ, ಎನ್.ಬಿ. ಬಿರಾದಾರ, ನಂದುಗೌಡ ಬಿರಾದಾರ ಇನ್ನಿತರರು ಇದ್ದರು.

# ಲೋಕಸಭೆ ಚುನಾವಣೆಗೆ ದಿಕ್ಸೂಚಿ

ಉದಯರಶ್ಮಿ ನ್ಯೂಸ್



ವಿಜಯಪುರ: ಪಂಚರಾಜ್ಯ ಚುನಾವಣೆಗಳಲ್ಲಿ ಬಿಜೆಪಿ ಪಕ್ಷ ಮೂರು ರಾಜ್ಯಗಳಲ್ಲಿ ಅಭೂತಪೂರ್ವ ಜಯ ಸಾಧಿಸಿದ್ದು ಈ ಫಲಿತಾಂಶ ಲೋಕಸಭೆ ಚುನಾವಣೆಗೆ ದಿಕ್ಸೂಚಿಯಾಗಿದೆ ಎಂದು ಬಿಜೆಪಿ ಮುಖಂಡ ಹಾಗೂ ಮೀನುಗಾರರ ಸಂಘದ ರಾಷ್ಟ್ರೀಯ ಉಪಾಧ್ಯಕ್ಷ ಡಾ.ಗೌತಮ್ ಚೌಧರಿ ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಕುರಿತು ಸೋಮವಾರ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ರಾಜಸ್ಥಾನ, ಮಧ್ಯಪ್ರದೇಶ ಹಾಗೂ ಛತ್ತೀಸಗಢ ರಾಜ್ಯಗಳಲ್ಲಿ ಬಿಜೆಪಿ ಭರ್ಜರಿ ಜಯ ದಾಖಲಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಜನಪರ ಆಡಳಿತವನ್ನು ಇಡೀ ದೇಶವೇ ಮೆಚ್ಚಿದೆ ಎನ್ನುವುದಕ್ಕೆ ಈ ಫಲಿತಾಂಶವೇ ಸಾಕ್ಷಿ. ಪ್ರತಿಪಕ್ಷಗಳು ಬಿಜೆಪಿ ಹಾಗೂ ಪ್ರದಾನಿ ಮೋದಿ ಕುರಿತು ಎಷ್ಟೇ ಅವಹೇಳನಕಾರಿಯಾಗಿ ಮಾತನಾಡಿದರೂ ಜನತೆ ಅದನ್ನು ಗಣನೆಗೆ ತೆಗೆದುಕೊಳ್ಳದೇ ಮೋದಿ ಅವರ ನಾಯಕತ್ವವನ್ನು ಮೆಚ್ಚಿ ಬಿಜೆಪಿಗೆ ಆಶೀರ್ವದಿಸಿದ್ದಾರೆ ಎಂದು ಹೇಳಿದರು.

ಈ ಫಲಿತಾಂಶದಿಂದ ಕಾರ್ಯಕರ್ತರಲ್ಲಿ ಹೊಸ ಹುಮ್ಮಸ್ಸು ಮೂಡಿದೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿಯೂ ಸಹ ದೇಶದಲ್ಲಿ ಮತ್ತೆ ಬಿಜೆಪಿ ಪಕ್ಷ ಅಧಿಕಾರಕ್ಕೆ ಬರಲಿದೆ ಎಂಬ ವಿಶ್ವಾಸವನ್ನು ಡಾ.ಗೌತಮ್ ಚೌಧರಿ ವ್ಯಕ್ತಪಡಿಸಿದರು.

# ನಾಟಕಗಳು ಸಮಾಜದ ಪ್ರತಿಬಿಂಬ :ನುಗ್ಗಲಿ

ಉದಯರಶ್ಮಿ ನ್ಯೂಸ್

ನಿಡಗುಂದಿ: ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದುವ ಮೂಲಕ ಸಮ ಸಮಾಜವನ್ನು ನಿರ್ಮಿಸುವಲ್ಲಿ ನಾಟಕಗಳು ಬಹುಮುಖ್ಯ ಪಾತ್ರ ವಹಿಸುತ್ತವೆ ಎಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ನುಗ್ಗಲಿ ಅಭಿಪ್ರಾಯಪಟ್ಟರು.

ಪಟ್ಟಣದ ಆರಾಧ್ಯ ದೇವಿ ತಾಯಿ ಬನಶಂಕರಿ ದೇವಿ ಜಾತ್ರೆಯ ಅಂಗವಾಗಿ ಶನಿವಾರ ರಾತ್ರಿ ಬನಶಂಕರಿ ಯುವಕ ಮಂಡಳ ಹಮ್ಮಿಕೊಂಡಿದ್ದ "ತಾಳಿ ಹರಿಯಲಿಲ್ಲ, ಶೀಲ ಉಳಿಯಲಿಲ್ಲ' ನಾಟಕ ಉದ್ಘಾಟಿಸಿ ಅವರು ಮಾತನಾಡಿದರು.

ಸಮ, ಶ್ರಮ ಸಂಸ್ಕೃತಿಯ ಹರಿಕಾರರು, ತಮ್ಮ ಬೆವರಿನ ಹನಿಯಿಂದಲೇ ಇಡೀ ಸಮಾಜದ ಜನರ ಮಾನ ಮುಚ್ಚುವ ಬಟ್ಟೆ ನೇಯ್ಗೆಯ ಕಾಯಕದ ದೇವಾಂಗ ಸಮಾಜದ ಕಾರ್ಯನಿಷ್ಠೆ ಶ್ಲಾಘನೀಯ ಎಂದರು. ಎರಡು ದಿನ ಪ್ರದರ್ಶನಗೊಳ್ಳುತ್ತಿರುವ ಈ ಸಾಮಾಜಿಕ ನಾಟಕದಲ್ಲಿ ಶಿಕ್ಷಕರೇ ಹೆಚ್ಚಿನ ಸಂಖ್ಯೆಯ ಪಾತ್ರಧಾ–ರಿಯಾಗಿರುವುದು ಸಂತಸದ ಸಂಗತಿ



ಎಂದರು.

ನಾಟಕಗಳು ಮನರಂಜನೆಯಲ್ಲ, ಅಲ್ಲಿಯೂ ಸಾಕಷ್ಟು ಬದಲಾವಣೆಗಳಾಗುತ್ತಿವೆ, ಆಧುನಿಕ ನಾಟಕಕಾರಗಳು ಬರೆದಿರುವ ನಾಟಕಗಳು ಕೂಡಾ ಗ್ರಾಮೀಣ ಭಾಗದಲ್ಲಿ ಕಲಾ ಆಸಕ್ತರು ಪ್ರಸಾರ ಮಾಡಿ ಕನ್ನಡತನದ ಶಕ್ತಿ ಇನ್ನಷ್ಟು ಹೆಚ್ಚಿಸಬೇಕು ಎಂದರು.

ನಿಡಗುಂದಿಯ ರುದ್ರೇಶ್ವರ ಸಂಸ್ಥಾನ ಮಠದ ರುದ್ರಮುನಿ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಶಿಕ್ಷಕ ಸಂಘಟನೆಯ ಮುಖಂಡರಾದ ಅರ್ಜುನ ಲಮಾಣಿ, ಹನುಮಂತ ಕೊಣದಿ, ಜಗದೀಶ ಬೋಳಸೂರ, ಸಿ.ಟಿ. ಜತ್ತಿ, ಅಲ್ಲಾಭಕ್ಷ ವಾಲೀಕಾರ, ಮಹಾಂತೇಶ ಮುಕಾರ್ತಿಹಾಳ, ಆರ್.ಎಸ್. ಕಮತ, ಎಂ.ಆರ್. ಮಕದಾನದಾರ್, ಆನಂದ ಗೌಡರ, ಸಲೀಂ ದಡೆದ, ಬಿ.ಐ. ಚಲ್ಮಿ, ಎಂ.ಎಂ. ಮುಲ್ಲಾ ಮತ್ತೀತರರು ನಾಟಕದ ಉದ್ಘಾಟನೆಯ ವಿವಿಧ ಕಾರ್ಯಕ್ರಮ ನೆರವೇರಿಸಿದರು.

ಮುಖಂಡರಾದ ಬಸವರಾಜ ಹಳೇಮನಿ, ಸಂಗಮೇಶ ಗೌಡರ, ಶಂಕರಲಿಂಗ ಗೌಡರ, ವಿರೂಪಾಕ್ಷಪ್ಪ ಅಂಕದ, ಪಟ್ಟಣ ಪಂಚಾಯಿತಿ ಸದಸ್ಯರಾದ ಶಿವಾನಂದ ಮುಚ್ಚಂಡಿ, ಹಣಮಂತ ಗುಂಡಿನಮನಿ, ಗಣೇಶ ಕೂಚಬಾಳ, ಡಾ ಸಂಗಮೇಶ ಗೂಗಿಹಾಳ, ಡಾ ಸಂತೋಷ ಬಸರಕೋಡ, ಎಸ್.ಎಸ್. ಹುಬ್ಬಳ್ಳಿ, ವೆಂಕಟೇಶ ವಡ್ಡರ, ಬಸವರಾಜ ಸಕ್ರಿ ಮತ್ತೀತರರು ವೇದಿಕೆಯ ಮೇಲಿದ್ದರು.

# ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಅರಳುವುದು ಖಚಿತ

ಉದಯರಶ್ಮಿ ನ್ಯೂಸ್

ವಿಜಯಪುರ: ಮೂರು ರಾಜ್ಯಗಳಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿರುವುದು ಮುಂಬರುವ ಲೋಕಸಭೆ ಚುನಾವಣೆಯ ಬಿಜೆಪಿ ಗೆಲುವಿನ ಮುನ್ನುಡಿಯಾಗಿದ್ದು, ಈ ಗೆಲುವಿನ ನಗೆ ಇದೇ ರೀತಿ ಮುನ್ನಡೆಯಲಿದೆ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಉಮೇಶ ಕಾರಜೋಳ ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರತಿಪಕ್ಷಗಳು ಎಷ್ಟೇ ಬಿಜೆಪಿ ಬಗ್ಗೆ ವಿರೋಧ ನಿಲುವು ಬಿತ್ತಲು ಪ್ರಯತ್ನಿಸಿದರೂ ಸಹ ಜನತೆ ಬಿಜೆಪಿಗೆ ಆಶೀರ್ವಾದ ಮಾಡಿ ಮತ್ತೊಮ್ಮೆ ಮೋದಿ ಎನ್ನುವ ಸಂದೇಶವನ್ನು ಈ ಚುನಾವಣೆ



ಮಧ್ಯಪ್ರದೇಶ, ಛತ್ತೀಸಘಢ ಹೀಗೆ ಮೂರು ರಾಜ್ಯಗಳಲ್ಲಿ ಗೆಲುವಿನ ನಗೆ ಬೀರಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಭ್ರಷ್ಟಾಚಾರ ರಹಿತ ಶುದ್ಧ ಆಡಳಿತ, ಬಿಜೆಪಿ ಜನಪರ ಚಿಂತನೆ, ಕಾರ್ಯಕರ್ತರ ಅವಿರತ ಶ್ರಮದ ಫಲವಾಗಿ ಬಿಜೆಪಿ ಗೆಲುವಿನ ನಗೆ ಬೀರಿದೆ. ಇದು ಖಂಡಿತವಾಗಿಯೂ ಲೋಕಸಭಾ ಚುನಾವಣೆ ದಿಕ್ಸೂಚಿಂ–ಯಾಗಿದೆ. ಲೋಕಸಭೆ ಚುನಾವಣೆಯಲ್ಲಿ ಮತ್ತೊಮ್ಮೆ ಬಿಜೆಪಿ ಅರಳುವುದು ಖಚಿತವಾಗಿದೆ, ಈ ಗೆಲುವು ಸಮಸ್ತ ಕಾರ್ಯಕರ್ತರ ಗೆಲುವಾಗಿದೆ ಎಂದು ಅವರು ಹೇಳಿದ್ದಾರೆ.

ಕಿಸಾನ್ ಸಮ್ಮಾನ್, ಉಜ್ವಲ ಯೋಜನೆ, ಜನಧನ್ ಹೀಗೆ ಜನರನ್ನು ನೇರವಾಗಿ ತಲುಪುವ ಅನೇಕ ಯೋಜನೆಗಳನ್ನು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ರೂಪಿಸಿದೆ, ಹೀಗಾಗಿ ಅಭಿವೃದ್ಧಿಗೆ ಜನತೆ ಬಿಜೆಪಿಗೆ ಬೆಂಬಲಿಸಿದ್ದಾರೆ ಎಂದು ಉಮೇಶ ಕಾರಜೋಳ ಹೇಳಿದ್ದಾರೆ.

# ಇಂಡಿಯಲ್ಲಿ ಬಿಜೆಪಿ ವಿಜಯೋತ್ಸವ ಸಂಭ್ರಮ

ಉದಯರಶ್ಮಿ ನ್ಯೂಸ್

ಇಂಡಿ: ಪಂಚ ರಾಜ್ಯ ಚುನಾವಣೆಗಳಲ್ಲಿ ಬಿಜೆಪಿ ಪಕ್ಷ ಮೂರು ರಾಜ್ಯಗಳಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಇಂಡಿ ಮಂಡಲ ಬಿಜೆಪಿ ಕಾರ್ಯಕರ್ತರು ಭಾನುವಾರ ಬಸವೇಶ್ವರ ವೃತ್ತದಲ್ಲಿ ಸಿಹಿ ಹಂಚಿ ಪಟಾಕಿ ಸಿಡಿಸಿ ಸಂಭ್ರಮಿಸಿದರು.



ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕಿವುಡೆ ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಕಾಸು ಗೌಡ ಬಿರಾದಾರ, ಬಿಜೆಪಿ ಮುಖಂಡ ಅನಿಲ ಜಮಾದಾರ ಮಾತನಾಡಿ, ಈ ಪಂಚರಾಜ್ಯ ಚುನಾವಣೆಗಳಲ್ಲಿ ಬಿಜೆಪಿ ಪಕ್ಷ ಮೂರು ರಾಜ್ಯಗಳಲ್ಲಿ ಜಯ ಸಾಧಿಸಿದ್ದು ಮುಂಬರುವ ಲೋಕಸಭಾ ಚುನಾವಣೆಯಲ್ಲಿಯೂ ಸಹ ದೇಶದಲ್ಲಿ ಮತ್ತೆ ಬಿಜೆಪಿ ಪಕ್ಷ ಅಧಿಕಾರಕ್ಕೆ ಬರಲಿದೆ.

ಈ ಚುನಾವಣೆಯ ಫಲಿತಾಂಶ ಲೋಕಸಭೆ ಚುನಾವಣೆಗೆ ದಿಕ್ಸೂಚಿಯಾಗಿದೆ. ಫಲಿತಾಂಶದಿಂದ ಕಾರ್ಯಕರ್ತರಲ್ಲಿ ಹೊಸ ಹುಮ್ಮಸ್ಸು ಮೂಡಿದೆ ಈ ಬಾರಿ ರಾಜ್ಯದ ಲೋಕಸಭೆ ಚುನಾವಣೆಯಲ್ಲಿಯೂ ಸಹ ಭಾರಿ ಗೆಲುವು ಸಾಧಿಸುವ ವಿಶ್ವಾಸವಿದೆ ಎಂದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಪಕ್ಷ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದು ವಿಶ್ವದಲ್ಲಿಯೇ ಭಾರತ ದೇಶಕ್ಕೆ ಅತ್ಯುತ್ತಮ ಮನ್ನಣೆ ಸಿಕ್ಕಿದೆ ಇಂತಹ ನಾಯಕನನ್ನು ಪಡೆದ ಭಾರತೀಯರೇ ಅದೃಷ್ಟವಂತರು ಎಂದು ವಿದೇಶಗಳ ಜನ ಮಾತನಾಡುತ್ತಿದ್ದಾರೆ. ಇಂತಹ ನಾಯಕನನ್ನು ಉಳಿಸಿಕೊಳ್ಳುವುದು ಪ್ರತಿಯೊಬ್ಬ ಭಾರತೀಯರ ಕರ್ತವ್ಯವಾಗಿದೆ. ಹೀಗಾಗಿ ಎಲ್ಲರೂ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷವನ್ನು ಬೆಂಬಲಿಸಿ ಭಾರತವನ್ನು ವಿಶ್ವ ಗುರುವನ್ನಾಗಿ ಮಾಡುವ ಪಣ ತೊಡೋಣ ಎಂದರು.

ಮುಖಂಡರಾದ ಶೀಲವಂತ ಉಮರಾಣಿ, ಶಾಂತು ಕಂಬಾರ, ಭೀಮಾಶಂಕರ ಆಳೂರ, ಮಹಾದೇವ ಗುಡ್ಡೆವಾಡಿ, ಅನುಸೂಯಾ ಮದರಿ, ಅಶೋಕ ಗೌಡ ಬಿರಾದಾರ, ಅನಿಲ ಜಮಾದಾರ, ಅಶೋಕ ಅಕಲಾದಿ, ಸಂಜೀವ ದಶವಂತ ನೇತಾಜಿ ಪವಾರ ದತ್ತ ಬಂಡೇನವರ, ಅಕ್ಷಯ್ ಸಿಂಧೆ ರಾಮಸಿಂಗ ಕನ್ನೊಳ್ಳಿ, ಅನಿಲ ಗೌಡ ಬಿರಾದಾರ ಪ್ರವೀಣ ಮಠ, ರಾಜು ಪಡಿಗೇರ, ಮತ್ತಿತರಿದ್ದರು.

# ಸಾರಂಗಮಠದಿಂದ ಸದಾ ಶ್ಲಾಘನೀಯ ಕಾರ್ಯ :ಶಾಸಕ ಮನಗೂಳಿ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ಸಾರಂಗಮಠವು ನಿರಂತರವಾಗಿ ಸಮಾಜಕ್ಕೆ ಮಾದ–ರಿಯಾಗುವ ಮತ್ತು ಸಂದೇಶ ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಭಾನುವಾರದಂದು ಪಟ್ಟಣದ ಸಾರಂಗಮಠದಲ್ಲಿ ಪೂಜ್ಯ ಚನ್ನವೀರ ಸ್ವಾಮೀಜಿ ಪ್ರತಿಷ್ಠಾನ ಸಾರಂಗಮಠ ಸಿಂದಗಿ ವತಿಯಿಂದ ಪೂಜ್ಯ ಶ್ರೀ ಚನ್ನವೀರ ಸ್ವಾಮೀಜಿಗಳ 130ನೆಯ ಜಯಂತೋತ್ಸವ ನಿಮಿತ್ಯವಾಗಿ ಹಮ್ಮಿಕೊಂಡ ಶಿವಶರಣೆಯರ ಜೀವನ ವಚನಾಮೃತ ಪ್ರವಚನದಲ್ಲಿ ಶತಮಾನಕಂಡ ಸಿಂದಗಿ ಗಣ್ಯ ವರ್ತಕರಿಗೆ ಹಾಗೂ ಗಣ್ಯ ಹಿರಿಯ–ರಿಗೆ ನಡೆದ ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರಂಗಮಠವು ಕಳೆದ 50 ವರ್ಷಗಳಿಂದ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸಿ ಗೌರವಿಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಒಂದು ವ್ಯಾಪಾರವನ್ನು ಶತಮಾನದ ಅಂಚಿನವರೆಗೂ ತೆಗೆದುಕೊಂಡು ಹೋಗುವುದು ಎಂದರೆ ಕಷ್ಟ. ಆದರೆ ಸಿಂದಗಿ ನಗರದಲ್ಲಿ ವಾರದ, ಕುಲಕರ್ಣಿ, ಪೋರವಾಲ್, ಕಮತಗಿ ಹಾಗೂ ಗೋಲಾ ಕುಟುಂಬಗಳು ಶತಮಾನ ಕಂಡಿರುವುದು ಶ್ಲಾಘನೀಯ ಎಂದರು.

ಈ ವೇಳೆ ಸನ್ಮಾನ ಸ್ವೀಕರಿಸಿದ



ಗಣ್ಯವರ್ತಕ ನೆಹರೂ ಪೋರವಾಲ್ ಮಾತನಾಡಿ, ಪರಮ ಪೂಜ್ಯ ಶ್ರೀ ಚನ್ನವೀರ ಸ್ವಾಮೀಜಿಗಳು ವ್ಯಾಪಾರ ಮಾಡಲಿಕ್ಕೆ ನಮಗೆ ಸ್ಥಳಾವಕಾಶ ಮಾಡಿಕೊಟ್ಟಿದ್ದರ ಪರಿಣಾಮ ನಮ್ಮ ವ್ಯಾಪಾರ ಶತಮಾನ ಕಾಣಲು ಸಾಧ್ಯವಾಗಿದೆ. ಅವರ ಆಶೀರ್ವಾದ ಸದಾ ನಮ್ಮ ನಿಮ್ಮೆಲ್ಲರ ಮೇಲಿರಲಿ ಎಂದರು.

ಬಳಿಕ ಅಶೋಕ ವಾರದ, ಶಿವಪ್ಪಗೌಡ ಬಿರಾದಾರ ಮಾತನಾಡಿದರು.

ಈ ವೇಳೆ ಶತಮಾನ ಕಂಡ ಗಣ್ಯ ವರ್ತಕರಿಗೆ ಹಾಗೂ ಶತಮಾನದ ಅಂಚಿನಲ್ಲಿರುವ ಹಿರಿಯರಿಗೆ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಸಾರಂಗಮಠದ ಶ್ರೀಗಳಿಗೆ ಡಾ. ಪ್ರಶಾಂತ ಗುಣಾರಿ ಹಾಗೂ ವಾರದ ಕುಟುಂಬದವರಿಂದ ತುಲಾಭಾರ ಸೇವೆ ನಡೆಯಿತು.

ಇದೇ ಸಂದರ್ಭದಲ್ಲಿ ವಚನಕಾರ ಬಿ.ಎನ್.ಪಾಟೀಲ ಇಬ್ರಾಹಿಂಪೂರ, ಸಯ್ಯದಕಾಶೀಮ ಹುಸೇನಿ ದಾದಾಪೀರ ಮಗರಬಿ, ನಾಜುಕಮಾ ಮಕ್ತುಮಸಾ ಮರ್ತುರ, ಬಾಬು ಕಮತಗಿ, ಅಶೋಕ ಅಲ್ಲಾಪುರ, ಎಂ.ಎ ಬಂದಾಳ, ಹೆಚ್.ಟಿ ಕುಲಕರ್ಣಿ, ಸೋಮಶೇಖರ ಜೋಗುರ, ವಿ.ಡಿ. ಪಾಟೀಲ, ಎಸ್. ಎನ್.ಕುಂಬಾರ, ಎಸ್.ಎನ್. ಸಂಗಮ, ರವಿ ಗೋಲಾ, ಎಸ್. ಎಂ. ಬಿರಾದಾರ, ಡಾ. ಶರಣಬಸವ ಜೋಗುರ, ಡಾ. ಅರವಿಂದ ಮನಗೂಳಿ, ಸೋಮನಗೌಡ ಬಿರಾದಾರ್, ಚನ್ನಪ್ಪ ಕತ್ತಿ, ಶಿವಕುಮಾರ ಜೋಗುರ, ಮಹಾನಂದ ಬಮ್ಮಣ್ಣಿ, ಸುಜಾತ ಕಿಣಗಿ, ಮುಕ್ತಾಯಕ್ಕ ಕತ್ತಿ, ನೀಲಾಂಬಿಕಾ ಕತ್ತಿ, ನವೀನ ಶೆಳ್ಳಗಿ ಸೇರಿದಂತೆ ಶ್ರೀಮಠದ ಭಕ್ತರು ಇದ್ದರು.

## ಪಶು ಸಖಿ ತರಬೇತಿ ಕಾರ್ಯಾಗಾರದಲ್ಲಿ ಜಿಪಂ ಸಿಇಓ ರಾಹುಲ್ ಶಿಂಧೆ ಸಲಹೆ

# ಪಶು ಸಖಿಯರು ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಿ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಡೇ–ಎನ್‌ಆರ್‌ಎಲ್–ಎಂ) ಹಾಗೂ ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ವಿಜಯಪುರ ಇವರುಗಳ ಸಹಯೋಗದೊಂದಿಗೆ ರುಡಸೆಟ್ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾದ 06 ದಿನಗಳ ಮೊದಲನೇ ಮಾಡ್ಯೂಲ್ ಪಶು ಸಖಿಯರ ತರಬೇತಿ ಕಾರ್ಯಾಗಾರವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಅವರು ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು "06 ದಿನಗಳ ಈ ಒಂದು ಪಶು ಸಖಿಯರ ತರಬೇತಿ ಕಾರ್ಯಾಗಾರವು ಬಹಳ ಉಪಯುಕ್ತವಾದ ತರಬೇತಿಯಾಗಿದೆ. ಈಗಾಗಲೇ ಕಳೆದ ಒಂದು ವರ್ಷದಿಂದ ನಮ್ಮ ಜಿಲ್ಲೆಯ ಎಲ್ಲಾ ತಾಲೂಕುಗಳ ಪಶು ಚಿಕಿತ್ಸಾಲಯಗಳಲ್ಲಿ ಎಲ್ಲ ಪಶು ಸಖಿಯರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಜಿಲ್ಲಾ ಪಂಚಾಯತ ವಿಜಯಪುರದಿಂದ ಈಗಾಗಲೇ ಒಂದು ವರ್ಷದ ಪಶು ಸಖಿಯರ ಗೌರವಧನವನ್ನು



ಪಾವತಿಸಲಾಗಿದೆ. ಪಶು ಸಖಿಯರು ತರಬೇತಿಯಲ್ಲಿ ಕಲಿಯುವ ವಿಷಯಗಳನ್ನು ತಮ್ಮ ಗ್ರಾಮ ಪಂಚಾಯತಿ ಮಟ್ಟದಲ್ಲಿ ಪರಿಣಾಮಕಾ–ರಿಯಾಗಿ ಅನುಷ್ಠಾನ ಮಾಡಬೇಕು. ಎಲ್ಲ ರೈತ್ತರನ್ನು ಸಂಘಟಿಸುವುದು ನಿಮ್ಮ ಕಾರ್ಯವಾಗಬೇಕು. ರೈತ್ತರನ್ನು ಸಂಘಟಿಸುವ ಮೂಲಕ ಅವರಿಗೆ ಸರಕಾರ ಮತ್ತು ಇಲಾಖೆಯಿಂದ ಸಿಗುವ ಎಲ್ಲ ಸೌಲಭ್ಯಗಳ ಮಾಹಿತಿಯನ್ನು ಒದಗಿಸಬೇಕು. ಗ್ರಾಮದ ಎಲ್ಲ ರೈತ್ತರಿಗೆ ಮತ್ತು ತಮ್ಮ ಗ್ರಾಮದ ಪ್ರತಿ ವ್ಯಕ್ತಿಗೆ ಮಾಹಿತಿ ನೀಡುವ ಸಂಪನ್ಮೂಲ ವ್ಯಕ್ತಿಗಳಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಪಶು ಪಶುಸಂಗೋಪನಾ ಇಲಾಖೆ ಮತ್ತು ರೈತರ ನಡುವೆ ಇರುವ ಅಂತರವನ್ನು ತಗ್ಗಿಸಿ ಎರಡರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸಲು ಹಾಗೂ ವಿಸ್ತರಣಾ ಚಟುವಟಿಕೆಗಳನ್ನು ಸಮರ್ಪಕವಾಗಿ ತಲುಪಿಸಲು ಪ್ರತಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳಿಗೆ ಒಬ್ಬರಂತೆ ನಮ್ಮ ಜಿಲ್ಲೆಯಲ್ಲಿ 211 ಗ್ರಾಮ ಪಂಚಾಯತಿಗಳಿಗೆ ಕೃಷಿ ಸಖಿಯರನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಪಶು ಸಖಿಯರು ಗ್ರಾಮೀಣ ಭಾಗದ ರೈತ ಮಹಿಳೆಯರಿಗೆ ಪಶು ಸಂಗೋಪನಾ ಚಟುವಟಿಕೆಗಳ ಸಮಗ್ರ ಮಾಹಿತಿ ನೀಡುವುದು. ಆಯಾ ಗ್ರಾಮದ ಪಶು ವೈದ್ಯರ ಮಾರ್ಗದರ್ಶನದಲ್ಲಿ ರೋಗ ನಿರೋಧಕ ಲಸಿಕೆ, ಪ್ರಥಮ ಚಿಕಿತ್ಸೆ ಕುರಿತು ಹೆಚ್ಚಿನ ಪ್ರಚಾರ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಪಶು ಸಖಿಯರ ತರಬೇತಿ ಕೇವಲ ಸೈದ್ಧಾಂತಿಕವಾಗಿ ಕೊಠಡಿಗೆ ಮಾತ್ರ ಸೀಮಿತವಾಗದೆ, ಪ್ರಾಯೋಗಿಕವಾಗಿ ಪ್ರಾತ್ಯಕ್ಷಿತವಾಗಿ ನಡೆಯಬೇಕು ಅಂದಾಗ ಮಾತ್ರ ಪಶು ಸಖಿಯರ ತರಬೇತಿ ಅರ್ಥ–ಪೂರ್ಣವಾಗಿ ಯಶಸ್ವಿಯಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಶು ಸಂಗೋಪನೆ ಇಲಾಖೆ ಉಪನಿರ್ದೇಶಕ ಡಾ॥ ಅಶೋಕ ಘೋಣಸಗಿ, ಸೇ–ರಿದಂತೆ ಪಶು ಸಂಗೋಪನೆ ಇಲಾಖೆ ಮತ್ತು ಜಿಲ್ಲಾ ಪಂಚಾಯತಿ ಎನ್‌ಆರ್–ಎಲ್‌ಎಂ ವಿಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಆಟೋ ನಿಲ್ದಾಣ ಸ್ಥಳಾವಕಾಶಕ್ಕೆ ಚಾಲಕರ ಮನವಿ



ಉದಯರಶ್ಮಿ ನ್ಯೂಸ್

ಇಂಡಿ: ಆಟೋ, ಟಮ್ ಟಮ್ ನಿಲುಗಡೆಗೆ ಸ್ಥಳಾವಕಾಶವನ್ನು ಮಾಡಿಕೊಡಿ ಎಂದು ಅಟೋ ಚಾಲಕರ ಮತ್ತು ಮಾಲಕರ ಸಂಘದವರು ತಾಲೂಕು ಆಡಳಿತ ಸೌಧಕ್ಕೆ ಆಗಮಿಸಿ ಉಪವಿಭಾಗ ಅಧಿಕಾರಿ ಅಬೀದ್ ಗದ್ಯಾಳ ಅವರಿಗೆ ಸೋಮವಾರ ಮನವಿ ಸಲ್ಲಿಸಿದರು.

ಪಟ್ಟಣದಲ್ಲಿ ಅಟೋ ಮತ್ತು ಟಮ್ ಟಮ್ ನಿಲುಗಡೆಗೆ ಎಲ್ಲಿಯೂ ಸ್ಥಳಾವಕಾಶವಿಲ್ಲ. ಆದ್ದರಿಂದ ಪ್ರತಿನಿತ್ಯ ಬರುವ ಸಾವಿರಾರು ಪ್ರಯಾಣಿಕ–ರಿಗೆ ಮತ್ತು ಅಟೋ, ಟಮ್ ಟಮ್ ಚಾಲಕರಿಗೆ ಸಮಸ್ಯೆಯಾಗುತ್ತಿದೆ.

ಜಿಲ್ಲೆ ಮತ್ತು ನೆರೆ ಮಹಾರಾಷ್ಟ್ರ ರಾಜ್ಯದಿಂದ ಬರುವ ನಿತ್ಯದ ಪ್ರಯಾಣಿಕರಿಗೆ ಜನಸ್ನೇಹಿಯಾಗಿ ಅವರ ಸ್ಥಳಕ್ಕೆ ತಲುಪಿಸುವ ಕಾರ್ಯ ಮಾಡುತ್ತಿದ್ದೆವೆ. ಆದ್ದರಿಂದ ದೂರದ ಊರಿನ ಪ್ರಯಾಣಿಕರ ಸಹಕಾರಕ್ಕೆ ಮತ್ತು ವಾಹನ ಚಾಲಕರ ಸಮಸ್ಯೆ ತಪ್ಪಿಸಲು, ಪಟ್ಟಣದ ಬಸ್ ನಿಲ್ದಾಣ ಎದುರುಗಡೆ ಹಾಗೂ ಮಹಾವೀರ ವೃತದಲ್ಲಿ ಆಟೋ ಮತ್ತು ಟಮ್ ನಿಲುಗಡೆಗೆ ಸ್ಥಳಾವಕಾಶ ಮಾಡಕೊಡಬೇಕೆಂದು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಅಟೋ ಚಾಲಕರ ಸಂಘದ ಅಧ್ಯಕ್ಷ ಖಾಜಾಸಾಹೇಬ ಬಾಗವಾನ, ಉಪಾಧ್ಯಕ್ಷ ಮಲ್ಲಿಕಾರ್ಜುನ ಮದರಕಂಡಿ, ರೈಸ್ ಅಷ್ಟೇಕರ್, ಇಸಾಕ ಎಕ್ಕವಾಲೆ, ಸಿದ್ರಾಮ ಹೊಸಮನಿ, ನರಸಪ್ಪ ಬಜಂತ್ರಿ, ಮಹೇಶ ಅಗಸರ, ರಿಜ್ವಾನ್ ಅಸ್ಟೆಕಾರ, ಅಸ್ಪಾಕ ಮುಲ್ಲಾ, ಸಿದ್ದಪ್ಪ ಬಾವಿಕಟ್ಟಿ, ಗೈಬುಸಾಬ ಬಾಗವಾನ, ಬಸವರಾಜ ರೋಡಗಿ, ಯುವರಾಜ ರಾಠೋಡ, ಮುಸ್ತಾಕ ಯಡ್ರಾಮಿ, ಪರಸುರಾಮ ಕೊಡಹೊನ್ನ, ಅಪ್ಪಾಜಿ ರಾಠೋಡ, ರಿಯಾಜ ಮುಲ್ಲಾ, ಅಸ್ಪಾಕ ರೂಗಿ, ಸಮೀರ ಜಾದವ, ಆಕಾಶ ಜಾಧವ ಉಪಸ್ಥಿತರಿದ್ದರು.

# ಡಿ.6ರಂದು ಸುವರ್ಣ ಸೌಧದ ಎದುರು ಐಟಿಐ ಮಂಡಳಿ ಧರಣಿ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಖಾಸಗಿ ಕೈಗಾ–ರಿಕಾ ತರಬೇತಿ ಸಂಸ್ಥೆ (ಐಟಿಐ) ಗಳನ್ನುಇಲಾಖೆ ವೇತನಾನುದಾನಕ್ಕೆ ಒಳಪಡಿಸಲು ಪೂರ್ವಭಾವಿ ಪರಿವೀಕ್ಷಣೆ ಕೈಗೊಂಡಿದ್ದರೂ ಸರ್ಕಾರ ವೇತನಾನುದಾನ ನೀಡಲು ಮೀನಾಮೇಷ ಎಣಿಸುತ್ತಿರುವುದು ಖಂಡನೀಯವಾಗಿದೆ. ಈ ಕು–ರಿತು ಡಿ6 ರಂದು ಬೆಳಗಾವಿಯ ಸುವರ್ಣ ಸೌಧದ ಎದುರು ಬೃಹತ್ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳುತ್ತಿದ್ದು ರಾಜ್ಯದ ಎಲ್ಲ ಖಾಸಗಿ ಐಟಿಐಗಳ ಆಡಳಿತ ಮಂಡಳಿಯ ಮುಖ್ಯಸ್ಥರು ಹಾಗೂ ನೌಕರರು ಭಾಗಿಯಾಗುವಂತೆ ಕರ್ನಾಟಕ ರಾಜ್ಯ ಖಾಸಗಿ ಐಟಿ–ಐಗಳ ಸಂಘದ ರಾಜ್ಯಾಧ್ಯಕ್ಷ ಎಸ್.ಎಂ.ನೆರಬೆಂಚಿ ಮನವಿ ಮಾಡಿಕೊಂಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಐಟಿಐ ತರಬೇತಿಗೆ ಬಡವರ್ಗದ ಮಕ್ಕಳು ಬರುವುದರಿಂದ ಅವರಿಂದ ಬರುವಂಥ ಶುಲ್ಕಗಳಿಂದ ಸಿಬ್ಬಂದಿಗೆ ಸರ್ಕಾರ ನಿಗದಿಪಡಿಸಿದ ಸೂಕ್ತ ಗೌರವಧನ ಕೊಡಲು ಸಹ ಆಗುವುದಿಲ್ಲ. ಹಾಗಾಗಿ ಸರ್ಕಾರದ ಸಹಾಯಾನುದಾನದ ಅಗತ್ಯವಿದೆ. ಇದನ್ನು ಮನಗಂಡು ಹಿಂದಿನ ಸರ್ಕಾರಗಳು 1997ರಲ್ಲಿಯೇ ವೇತನ ಅನುದಾನ ಸಂಹಿತೆ ಜಾರಿಗೆ ತಂದಿದ್ದು ಅದರಂತೆ 7ವರ್ಷಕ್ಕೂ ಹೆಚ್ಚು ಸೇವೆ ಸಲ್ಲಿಸಿದ ಐಟಿಐಗಳಿಗೆ ವೇತನಾನುದಾನ ಕೊಡುತ್ತ ಬಂದಿವೆ. ಈಗಾಗಲೇ ರಾಜ್ಯದಲ್ಲಿ 192 ಅನುದಾನಿತ ಐಟಿ–ಐಗಳಿವೆ. ಆದರೆ 2010ರಲ್ಲಿ ಅಂದಿನ ಸರ್ಕಾರ ವೇತನಾನುದಾನ ಸಂಹಿತೆ ಹಿಂಪಡೆದು ವಿದ್ಯಾರ್ಥಿ ಕೇಂದ್ರಿತ ಅನುದಾನಕ್ಕೆ ಆದೇಶಿಸಿ ಖಾಸಗಿ ಐಟಿಐ ಸಂಸ್ಥೆಗಳಿಗೆ ಅನ್ಯಾಯ ಮಾಡಿದೆ. ಆದರೆ ಇದರಲ್ಲಿ ಶ್ರೇಣಿಕೃತ ವೇತನ, ಸೇವಾಭದ್ರತೆ ಇಲ್ಲದೇ ಇರುವುದ–ರಿಂದ ರಾಜ್ಯದ ಎಲ್ಲ ಖಾಸಗಿ ಐಟಿಐಗಳು ಇದನ್ನು ತಿರಸ್ಕರಿಸಿವೆ. ಹಾಗಾಗಿ ಸರ್ಕಾರ ಇನ್ನಾದರೂ ವಿದ್ಯಾರ್ಥಿ ಕೇಂದ್ರಿತ ಅನುದಾನ ಸಂಹಿತೆ ರದ್ದುಪಡಿಸಿ ಈ ಹಿಂದಿನ ವೇತನಾನುದಾನ ಸಂಹಿತೆಯನ್ನು ಮರು ಜಾರಿಗೊಳಿಸಬೇಕೆಂದು ಸರ್ಕಾರಕ್ಕೆ ಒತ್ತಾಯಿಸಲು ಈ ಹೋರಾಟ ಹಮ್ಮಿಕೊಳ್ಳಲಾಗಿದ್ದು ಖಾಸಗಿ ಐಟಿಐ ನ ಸಿಬ್ಬಂದಿ ಮತ್ತು ಆಡಳಿತ ಮಂಡಳಿಯ ಪ್ರತಿಯೊಬ್ಬರೂ ಭಾಗಿಯಾಗುವಂತೆ ಕೋರಿದ್ದಾರೆ.

# ಎನ್ಎಸ್ ಯುಐ ಉಸ್ತುವಾರಿಯಾಗಿ ಕುಂಟೋಜಿ



ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟ (ಎನ್.ಎಸ್.ಯು.ಐ)ದ ಬಾಗಲಕೋಟೆ, ಬೆಳಗಾವಿ ನಗರ ಹಾಗೂ ಬೆಳಗಾವಿ ಗ್ರಾಮಾಂತರ ಜಿಲ್ಲೆಗಳ ಉಸ್ತುವಾರಿಯಾಗಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸದ್ದಾಂ ಕುಂಟೋಜಿ ಅವರನ್ನು ಆಯ್ಕೆ ಮಾಡಿ ರಾಜ್ಯಾಧ್ಯಕ್ಷೆ ಕೀರ್ತಿ ಗಣೇಶ ಆದೇಶಿಸಿದ್ದಾರೆ.

# 12 ಮಕ್ಕಳಿಗೆ ಗಾಯ ; ಕೋಸಂಬೆ ವಿಷಾದ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ತಾಳಿಕೋಟೆ ತಾಲೂಕಿನ ಬಿಳೇಭಾವಿ ಗ್ರಾಮದಿಂದ ಬೊಮ್ಮನಹಳ್ಳಿ ಗ್ರಾಮಕ್ಕೆ ಕೂಲಿ ಕೆಲಸಕ್ಕೆ ಕರೆದೊಯ್ಯುವಾಗ ವಾಹನ ಅಪಘಾತವಾಗಿ ಓರ್ವ ಬಾಲಕಿ ಮೃತಪಟ್ಟು ಸುಮಾರು 12 ಮಕ್ಕಳು ತೀವ್ರವಾಗಿ ಗಾಯಗೊಂಡ ಘಟನೆಗೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶಶಿಧರ ಕೋಸಂಬೆ ವಿಷಾದ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು ಘಟನೆ ಕುರಿತು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ವರದಿ ನೀಡಲು ದೂರವಾಣಿ ಮೂಲಕ ತಿಳಿಸಿದ್ದಾಗಿ ಮತ್ತು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಸ್ವಯಂ ಪ್ರೇರಿತ ಪ್ರಕರಣ ದಾಖಲು ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

# ಗ್ರಾಪಂ ಕಾರ್ಯದರ್ಶಿಗಳ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಆಹ್ವಾನ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೇಡ್–1 ಕಾರ್ಯದರ್ಶಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ತಯಾರಿಸಲಾಗಿದ್ದು, ಸದರಿ ಪಟ್ಟಿಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ : 19–12–2023ರೊಳಗಾಗಿ ಸಂಬಂಧಿಸಿದ ತಾಲೂಕಾ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಅಥವಾ ನೇರವಾಗಿ ಜಿಲ್ಲಾ ಪಂಚಾಯತ್ ಕಾರ್ಯಾಲಯಕ್ಕೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಹಿತಿ ಹಕ್ಕು ಅಧಿನಿಯಮದಡಿ ಸುಳ್ಳು ಮಾಹಿತಿ :ದೂರು ದಾಖಲು

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಮಾಹಿತಿ ಹಕ್ಕು ಅಧಿನಿಯಮದ ಅಡಿ ಸುಳ್ಳು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ಇಲ್ಲಿನ ಪ್ರಭಾರ ಬಿಇಓ ಯು.ಬಿ.ಧರಿಕಾರ ಸೇರಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ನಾಲ್ಕು ಜನರ ಮೇಲೆ ನ್ಯಾಯವಾದಿ ವಿರೇಶ ಹಿರೇಮಠ ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ.

ವಿರೇಶ ಕಳೆದ ದಿನಗಳ ಹಿಂದೆ ಕೆಲವು ಮಾಹಿತಿಗಳನ್ನು ಕೋರಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯಕ್ಕೆ ಮಾಹಿತಿ ಹಕ್ಕು ಅಧಿನಿಯಮ 2005 ರ ಅಡಿ ಅರ್ಜಿ ಸಲ್ಲಿಸಿದ್ದು ಆ ಅರ್ಜಿಗೆ ಕೋರಲಾದ ದಾಖಲೆಗಳು ಇಟ್ಟಿರುವ ಕೊಠಡಿ ಮಳೆಯಿಂದ ಮೇಲ್ಛಾವಣಿ ಶಿಥಿಲಗೊಂದು ಸಾಕಷ್ಟು ಪ್ರಮಾಣದಲ್ಲಿ ಮಳೆ ನೀರು ಸೋರಿಕೆಯಾದ ಕಾರಣ ದಾಖಲೆಗಳು ನಾಶವಾಗಿವೆ ಎಂದು ಲಿಖಿತವಾಗಿ ಹಿಂಬರಹ ನೀಡಿದ್ದು ಇದು ಉದ್ದೇಶ ಪೂರ್ವಕವಾಗಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿದ್ದಾರೆ ಎಂದು ಆರೋಪಿಸಿ ನಿರ್ಗಮಿತ ಬಿಇಓ ಎಸ್.ಜೆ.ನಾಯಕ, ಪತ್ರಾಂಕಿತ ವ್ಯವಸ್ಥಾಪಕ ಬಿ.ಎಸ್.ಪಾಟೀಲ, ಕೇಸ್ ವರ್ಕರ್ ಸಿದ್ದನಗೌಡ ಪಾಟೀಲ ಮೇಲೆ ಪ್ರಕರಣ ದಾಖಲಿಸಿದ್ದಾರೆ.

# ಡಿ.6ರಂದು ಚಿಗುರು ಸಾಂಸ್ಕೃತಿಕ ಕಾರ್ಯಕ್ರಮ

ಉದಯರಶ್ಮಿ ನ್ಯೂಸ್

ವಿಜಯಪುರ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕರ್ನಾಟಕ ಸಂಭ್ರಮ–50ರ ಅಂಗವಾಗಿ ನಗರದ ವಿವೇಕನಗರದಲ್ಲಿರುವ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಡಿ.6 ರಂದು ಚಿಗುರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಚಿಗುರು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕು.ಸುಮಯ್ಯಾ ಶೇಖ ಅವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ನಾಟ್ಯ ಕಲಾ ಅಕಾಡೆಮಿ ವತಿಯಿಂದ ಸಮೂಹ ನೃತ್ಯ, ಕು.ನಿಜಬಾಯಿ ಹೋಸಾಳಿ ಏಕತಾಪ್ರಾಭಿನಯ, ಕು.ಲಕ್ಷ್ಮೀ ಮುರನಕೇರಿ ಅವರಿಂದ ಜಾನಪದ ಗೀತೆಗಳು ಹಾಗೂ ಕು.ಸಮರ್ಥ ಸಂಕೊಂಡ ಮತ್ತು ಸಂಗಡಿಗರಿಂದ ನಲಿ–ಕಲಿ ನಾಟಕ ಪ್ರದರ್ಶನ ಜರುಗಲಿವೆ.

ಅಂದು ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಉದ್ಘಾಟಿಸಲಿದ್ದಾರೆ. ವಿಜಯಪುರ ನಗರ ಶಾಸಕರಾದ ಬಸನಗೌಡ ಆರ್.ಪಾಟೀಲ(ಯತ್ನಾಳ) ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜವಳಿ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ, ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಸಂಸದ ರಮೇಶ ಜಿಗಜಿಣಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಬಿ.ಪಾಟೀಲ, ಪಿ.ಎಚ್.ಪೂಜಾರ, ಅಪ್ಪಾಜಿ ಸಿ.ಎಸ್.ನಾಡಗೌಡ, ವಿಠ್ಠಲ ಕಟಕದೊಂಡ, ಭೀಮನಗೌಡ (ರಾಜುಗೌಡ) ಬಸನಗೌಡ ಪಾಟೀಲ, ಅಶೋಕ ಮಲ್ಲಪ್ಪ ಮನಗೂಳಿ ಹಾಗೂ ವಿಶೇಷ ಆಹ್ವಾನಿತರಾಗಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಪ್ರೌಢಶಾಲೆಯ ಅಧ್ಯಕ್ಷರಾದ ಸುರೇಶ ದೇಸಾಯಿ ಹಾಗೂ ಮುಖ್ಯೋಪಾಧ್ಯಾಯ ಜಿ.ಎಂ.ಬಿರಾದಾರ ಅವರು ಭಾಗವಹಿಸಲಿದ್ದಾರೆ.

# ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ಉದಯರಶ್ಮಿ ನ್ಯೂಸ್

ವಿಜಯಪುರ: 110/11 ಕೆವಿ ಚಾಂದಕವಟೆ ವಿದ್ಯುತ್ ವಿತರಣಾ ಉಪ ಕೇಂದ್ರದಲ್ಲಿ ಈಗಿರುವ 1*10 ಎಂ.ವಿ.ಎ ಶಕ್ತಿ ಪರಿವರ್ತಕ ಬದಲು 1*20 ಎಂ.ವಿ.ಎ ಶಕ್ತಿ ಪರಿವರ್ತಕ ಅಳವಡಿಸುವ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ದಿನಾಂಕ: 06–12–2023ರ ಬೆಳಿಗ್ಗೆ 7.00 ಗಂಟೆಯಿಂದ ದಿನಾಂಕ:08.12.2023ರ ಸಂಜೆ 7:00 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, 11 ಕೆವಿ ಮಾರ್ಗದ ಮೇಲೆ ಬರುವ ಎಲ್ಲಾ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸುವಂತೆ ಇಂಡಿ ಹೆಸ್ಕಾಂನ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ತಾರಕಕ್ಕೇರಿದ ಶಾಸಕ ಯತ್ನಾಳ ಹಾಗೂ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಸುರೇಶ ಬಿರಾದಾರ ವೈಮನಸ್ಸು

# ಶಾಸಕ ಯತ್ನಾಳರದು ಹಿಂದುತ್ವದ ಸಂಸ್ಕೃತಿ ಅಲ್ಲ :ಬಿರಾದಾರ

ಉದಯರಶ್ಮಿ ನ್ಯೂಸ್

ವಿಜಯಪುರ: ಇತ್ತೀಚೆಗೆ ನಗರದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಅವಾಚ್ಯ ಶಬ್ದದಿಂದ ತಮ್ಮನ್ನು ನಿಂದಿಸಿದ ಶಾಸಕ ಬಸನಗೌಡ ಯತ್ನಾಳ ಮೆದುಳು ನಾಲಿಗೆಗೆ ಸಂಪರ್ಕವಿಲ್ಲದ ಓರ್ವ ಅನಾಗರಿಕ ವ್ಯಕ್ತಿ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಮತ್ತು ವಕ್ತಾರ ಸುರೇಶ ಬಿರಾದಾರ ಕುಟುಕಿದರು.

ಸೋಮವಾರ ನಗರದಲ್ಲಿ ನಡೆಸಿದ ಸುದ್ದಿಗೋಷ್ಠಿಯುದ್ದಕ್ಕೂ ಶಾಸಕ ಯತ್ನಾಳರ ವಿರುದ್ಧ ಅವರು ಏಕವಚನದಲ್ಲಿಯೇ ತೀವ್ರ ವಾಗ್ದಾಳಿ ನಡೆಸಿದರು.

ಇವರನ್ನು ಶಾಸಕರನ್ನಾಗಿ ಮಾಡಿದ್ದೇ ನಾವು. ನನ್ನನ್ನೇ ಯತ್ನಾಳ ಅವರು ನಗರದ ದಾನಮ್ಮ ದೇವಿಯ ಕಾರ್ಯಕ್ರಮದಲ್ಲಿ ಲೋಫರ್, ಎಂದು ಬೈದಿದ್ದಾರೆ. ಗಜ್ಜ ಇಡತೀನಿ ಎಂದಿದ್ದಾರೆ. ಚುನಾವಣೆಯಲ್ಲಿ ಇವರ ಸೋಲಿಗಾಗಿ ಹಣ ಹಂಚುತ್ತಿದ್ದೆ ಎಂದು ಸುಳ್ಳು ಆರೋಪ ಮಾಡಿದ ಇವರು ಇದನ್ನು ರುಜುವಾತು ಪಡಿಸಿದರೆ ತಾವು ರಾಜಕೀಯದಿಂದಲೇ ನಿವೃತ್ತಿಯಾಗುವುದಾಗಿ ಬಿರಾದಾರ ಸವಾಲು ಹಾಕಿದರು.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ನಾನೂ ಸಹ ಬಿಜೆಪಿ ಟಿಕೆಟ್ ಕೇಳಿದ್ದರಿಂದ ಯತ್ನಾಳರು ನನ್ನ ಮೇಲೆ ದ್ವೇಷ ಸಾಧಿಸುತ್ತಿದ್ದಾರೆ ಎಂದು ಆರೋಪಿಸಿದರು.

ಕೇವಲ ಆರು ಸಾವಿರ ಮತಗಳಿಂದ ಗೆದ್ದ ಯತ್ನಾಳರದು ಗೆಲುವಲ್ಲ. ರಾಜ್ಯ



ನಾಯಕನೆಂದುಕೊಳ್ಳುವ ಇವರಿಗೆ ಚುನಾವಣೆಯಲ್ಲಿ ಮೂವತ್ನಾಲ್ಕು ಕ್ಷೇತ್ರದಲ್ಲಿ ಇವರ ಉಸ್ತುವಾರಿ ಇತ್ತು. ಅಲ್ಲೆಲ್ಲ ಬಿಜೆಪಿ ಅಭ್ಯರ್ಥಿಗಳು ಸೋತಿದ್ದಾರೆ.

ಯತ್ನಾಳ್ ನಿಜವಾದ ಹಿಂದೂ ಹುಲಿಯಾಗಿದ್ದರೆ ತಾವು ಹಿಂದೆ ಸೋತಿದ್ದ ದೇವರಹಿಪ್ಪರಗಿ ಅಥವಾ ಪಕ್ಷ ಬಬಲೇಶ್ವರದಿಂದ ಕಣಕ್ಕಿಳಿಯಲು ಹೇಳಿದಾಗ ಏಕೆ ಹಿಂದೆ ಸರಿದರು ಎಂದು ಪ್ರಶ್ನಿಸಿದ ಬಿರಾದಾರ ಅವರು, ಗಂಡಸ್ತನ ಇದ್ದರೆ ಯತ್ನಾಳ ಬೇರೆ ಕ್ಷೇತ್ರದಿಂದ ಗೆದ್ದುಬರಲಿ ಎಂದು ಸವಾಲು ಹಾಕಿದರು.

ಮೈಕ್ ಮುಂದೆ ನಿಂತರೆ ಅನಾಗರಿಕರಂತೆ ಮಾತನಾಡುವ ಯತ್ನಾಳರದು ಬಿಜೆಪಿ, ಆರೆಸ್ಸೆಸ್ ಅಥವಾ ಹಿಂದುತ್ವದ ಸಂಸ್ಕೃತಿ ಅಲ್ಲ ಎಂದರು.

ನನ್ನ ಮುಗ್ಧತೆ ನನ್ನ ಬಲಹೀನತೆಯಲ್ಲ. ಮತ್ತೆ ನನ್ನ ಬಗ್ಗೆ ಅವರು ಯಾವುದೇ ವೇದಿಕೆಯಲ್ಲಿ ಕೇವಲವಾಗಿ ಮಾತನಾಡಲು ಮುಂದಾದರೆ ಪರಿಣಾಮ ನೆಟ್ಟಗಿರಲ್ಲ ಎಂದು ಬಿರಾದಾರ ಎಚ್ಚರಿಸಿದರಲ್ಲದೆ, ಇವರ ಹಲವು ಹಗರಣಗಳ ಅಗತ್ಯ ದಾಖಲೆಗಳು ನನ್ನ ಬಳಿ ಇದ್ದು ಸೂಕ್ತ ಸಮಯದಲ್ಲಿ ಬಯಲು ಮಾಡುವುದಾಗಿ ಸುರೇಶ ಬಿರಾದಾರ ಎಚ್ಚರಿಸಿದರು.

ರಾಜ್ಯದಲ್ಲಿ ಯತ್ನಾಳಂತವರಿಂದಲೇ ನಾವು ಅಧಿಕಾರ ವಂಚಿತರಾದೆವು. ಪಕ್ಷಕ್ಕೆ ಇವರಿಂದ ತೀರ್ವ ಮುಜುಗರವಾಗುತ್ತಿದೆ.

ಯುವಕರು ಯತ್ನಾಳ್ ಭಾಷಣದಿಂದ ಪ್ರಚೋದನೆಗೆ ಒಳಗಾಗದೇ ಎಚ್ಚರವಾಗಿ ಇರಬೇಕು ಎಂದು ಬಿರಾದಾರ ಸಲಹೆ ನೀಡಿದರು.

### ರಂಗಭೂಮಿ ಭೀಷ್ಮ ದಿ.ಶ್ರೀನಿವಾಸ ತಾವರಗಿರಿ ಸ್ಮರಣೆ । ಐದು ವಿಭಿನ್ನ ನಾಟಕಗಳ ಪ್ರದರ್ಶನ

# ವಿಜಯಪುರದಲ್ಲಿ ಡಿ.6 ರಿಂದ 10 ವರೆಗೆ ನಾಟಕೋತ್ಸವ

ಉದಯರಶ್ಮಿ ನ್ಯೂಸ್


ವಿಜಯಪುರ: ರಂಗಭೂಮಿ ಭೀಷ್ಮ ದಿ. ಶ್ರೀನಿವಾಸ ತಾವರಗಿರಿ ಸ್ಮರಣೆಯ ಅಂಗವಾಗಿ ತಾವರಗಿರಿ ಅವರ ಪರಿವಾರ ಹಾಗೂ ಅಭಿಮಾನಿ ಬಳಗದ ಸಹಯೋಗದಲ್ಲಿ ಇದೇ ಡಿಸೆಂಬರ 6 ರಿಂದ 10 ರ ವರೆಗೆ ನಗರದ ಮರಾಠಿ ವಿದ್ಯಾಲಯದಲ್ಲಿ ನಾಟಕೋತ್ಸವ ಹಮ್ಮಿಕೊಳ್ಳಲಾಗಿದೆ.

ದಿ.ಶ್ರೀನಿವಾಸ ತಾವರಗಿರಿ ಅವರ ಪಾರಿಜಾತ ಹವ್ಯಾಸಿ ರಂಗ ತಂಡ ಅರ್ಪಿಸುವ ಈ ನಾಟಕೋತ್ಸವದ ಕುರಿತು ಶಶಿ ತಾವರಗಿರಿ ಅವರು ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ವಿವರಣೆ ನೀಡಿದರು.

ಐದು ದಿನಗಳ ಕಾಲ ನಡೆಯುವ ಈ ನಾಟಕೋತ್ಸವದಲ್ಲಿ ಸಮಾಜಕ್ಕೆ ಒಂದು ಒಳ್ಳೆಯ ಸಂದೇಶ ನೀಡುವ ಐದು ವಿಭಿನ್ನ ನಾಟಕಗಳ ಪ್ರದರ್ಶನ ನಡೆಯಲಿದೆ. ಪ್ರತಿದಿನ ಸಂಜೆ 7 ಗಂಟೆಗೆ ನಾಟಕ ಪ್ರದರ್ಶನ ಪ್ರಾರಂಭವಾಗುತ್ತಿದ್ದು, ಸಾರ್ವಜನಿಕರಿಗೆ ಉಚಿತ ಪ್ರವೇಶವಿರುತ್ತದೆ ಎಂದು ಅವರು ತಿಳಿಸಿದರು.

ಡಿ.6 ರಂದು ಮಂಡ್ಯ ರಮೇಶ ನಿರ್ದೇಶನದಲ್ಲಿ ಮೈಸೂರು ನಟನ ತಂಡದವರಿಂದ ಚೋರ ಚರಣದಾಸ ನಾಟಕ ಪ್ರದರ್ಶನಗೊಳ್ಳುವುದು. ಹಿರಿಯ ವಿದುಷಿ ಲತಾ ಜಹಾಗೀರದಾರ ಅವರು ನಾಟಕೋತ್ಸವ ಉದ್ಘಾಟಿಸುವರು. ಚಲನಚಿತ್ರ ನಟ ಮಂಡ್ಯರಮೇಶ ಅಧ್ಯಕ್ಷತೆ ವಹಿಸುವರು. ಜಿಲ್ಲಾಧಿಕಾರಿ ಟಿ. ಭೂಬಾಲನ್, ಡಾ.ಬಾಬುರಾಜೇಂದ್ರ ನಾಯಕ, ನ್ಯಾಯವಾದಿ ವ್ಹಿ. ಎಸ್.ಪಾಟೀಲ (ಬೀರಲದಿನ್ನಿ), ಬೆಳಗಾವಿ ವಿಭಾಗದ ಆರ.ಎಸ್. ಎಸ್.ಸಂಘಟನಾ ಕಾರ್ಯದರ್ಶಿ ಪ್ರಕಾಶ ಅಕ್ಕಲಕೋಟ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಈ ಸಮಾರಂಭದಲ್ಲಿ ಶ್ರೀಮತಿ ಪ್ರಸಾದ ಮೇಡಂ, ಶ್ರೀಮತಿ ಜಯಶ್ರೀ ಫಡ್ನೀಸ್ (ಕುಲಕರ್ಣಿ), ಶ್ರೀಮತಿ ಮೀನಾ ಪಾಟೀಲ(ಹಿರೇಮಠ) ಅವರನ್ನು ಸನ್ಮಾನಿಸಲಾಗುವುದು.

ದಿ. 7 ರಂದು ಕೃಷ್ಣೇಗೌಡರ ಆನೆ ನಾಟಕ ಪ್ರದರ್ಶನವಾಗುತ್ತಿದ್ದು, ಮೈಸೂರು ನಟನ ತಂಡದವರು ಈ ನಾಟಕವನ್ನು ಅಭಿನಯಿಸಲಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಿಷಿಕೇಶ ಸೋನಾವಣೆ ಅಧ್ಯಕ್ಷತೆ ವಹಿಸಲಿದ್ದು, ಜೆಡಿಎಸ್ ಧುರೀಣ ಅಪ್ಪುಗೌಡ ಪಾಟೀಲ(ಮನಗೂಳಿ), ಬಿಜೆಪಿ ಧುರೀಣ ಶ್ರೀಧರ ನಾರಾಯಣಕರ, ಬಿಡಿಎ ಮಾಜಿ ಅಧ್ಯಕ್ಷ ಶ್ರೀಹರಿ ಗೊಳಸಂಗಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಈ ಸಮಾರಂಭದಲ್ಲಿ



ಶ್ರೀಕೃಷ್ಣ ಕೆ. ಕುಲಕರ್ಣಿ, ಸುಭಾಸ ಓಂಕಾರ, ಡಿ.ಕೆ.ಕುಲಕರ್ಣಿ, ಶ್ರೀಮತಿ ಮಾಣಿಕ ಕುಲಕರ್ಣಿ, ಶ್ರೀಮತಿ ಅಂಜಲಿ ನಾಡಗೌಡ ಅವರನ್ನು ಸನ್ಮಾನಿಸಲಾಗುವುದು.

ದಿ.8 ರಂದು ಡಾ.ಅರವಿಂದ ಕುಲಕರ್ಣಿ ನಿರ್ದೇಶನದಲ್ಲಿ ಬೆಳಗಾವಿಯ ರಂಗಸಂಪದ ತಂಡದವರಿಂದ ಮರಣ ಮೃದಂಗ ನಾಟಕ ಪ್ರದರ್ಶನಗೊಳ್ಳುವುದು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅಧ್ಯಕ್ಷತೆ ವಹಿಸುವರು. ಬಿಜೆಪಿ ಧುರೀಣ ಮಹಿಂದ್ರಕುಮಾರ ನಾಯಿಕ, ಮಾಜಿ ಶಾಸಕ ರಾಜು ಆಲಗೂರ, ಹಿರಿಯ ಪತ್ರಕರ್ತ ಗೋಪಾಲ ನಾಯಿಕ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಈ ಸಮಾರಂಭದಲ್ಲಿ ಸುಧೀಂದ್ರ ಕಲ್ಲೋಳ, ಸುನೀಲಕುಮಾರ ದೇಸಾಯಿ, ಶ್ರೀಕೃಷ್ಣ ಕುಲಕರ್ಣಿ(ಸಾರವಾಡ), ಗೋಪಾಲ ದೇಶಪಾಂಡೆ, ಸುಧೀಂದ್ರ ಜಹಾಗೀರದಾರ ಅವರನ್ನು ಸನ್ಮಾನಿಸಲಾಗುವುದು.

ದಿ.9 ರಂದು ಡಾ ಶ್ರೀಪಾಧ ಬಟ್ ನಿರ್ದೇಶನದಲ್ಲಿ ಬೆಂಗಳೂರು ದೃಶ್ಯ ತಂಡದವರಿಂದ ಮಹಿಳಾ ಭಾರತ ನಾಟಕ ಪ್ರದರ್ಶನ ನಡೆಯಲಿದೆ. ಶಾಸಕ ಸಿ.ಎಸ್.ನಾಡಗೌಡ ಅಧ್ಯಕ್ಷತೆ ವಹಿಸುವರು. ವಿಧಾನ ಪರಿಷತ್ ಸದಸ್ಯ ಸುನೀಲ ವಲ್ಯಾಪೂರ, ಶಾಸಕ ವಿಠ್ಠಲ ಕಟಕಧೊಂಡ, ಸಾಮಾಜಿಕ ಹೋರಾಟಗಾರ ಶಿವರಾಂ ಕೆ.ವ್ಹಿ. ಸಾಹಿತಿ ಶಿವರುದ್ರಯ್ಯ ಸ್ವಾಮಿ, ಡಾ.ಅರವಿಂದ ಢಾಣಕಶಿರೂರ, ನಾಟಕ ಅಕಾಡೆಮಿ ಮಾಜಿ ಸದಸ್ಯ ಶ್ರೀಪತಿ ಮಂಜನಬೈಲ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಈ ಸಮಾರಂಭದಲ್ಲಿ ನಾಟಕ ಅಕಾಡೆಮಿ ಮಾಜಿ ಅಧ್ಯಕ್ಷ ಎಲ್.ಬಿ.ಶೇಖ, ಮಕಾನದಾರ ಅವರನ್ನು ಸನ್ಮಾನಿಸಲಾಗುವುದು.

ದಿ.10 ರಂದು ಜಾಕೀರ ನದಾಫ್ ನಿರ್ದೇಶನದಲ್ಲಿ ಸವದತ್ತಿಯ ರಂಗ ಆರಾಧನಾ ಸಾಂಸ್ಕೃತಿಕ ಸಂಘಟನೆಯ ಕಲಾವಿದರಿಂದ ಬಾಸಿಂಗ ಬಲ ನಾಟಕ ಪ್ರದರ್ಶನಗೊಳ್ಳುವುದು.

ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಅಧ್ಯಕ್ಷತೆ ವಹಿಸುವರು. ಜೆಡಿಯು ರಾಜ್ಯಾಧ್ಯಕ್ಷ, ಮಾಜಿ ಶಾಸಕ ಮಹಿಮಾ ಪಟೇಲ್, ವಿಧಾನ ಪರಿಷತ್ ಮಾಜಿ ಸದಸ್ಯ ಡಾ. ಎಂ.ಪಿನಾಡಗೌಡ, ವಿಜಯಪುರದ ಶಿಕ್ಷಣ ಪ್ರಸಾರಕ ಮಂಡಳ ಡಾ.ಮಿಲಿಂದ ವಾಟವೆ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಈ ಸಮಾರಂಭದಲ್ಲಿ ವಸಂತರಾವ ಗಾಯಿ, ರಾಜ್ಯ ಪ್ರಶಸ್ತಿ ವಿಜೇತ ಹಿರಿಯ ಕಲಾವಿದ ವಿಶ್ವನಾಥ ವಂಶಾಕೃತಮಠ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕತ ಹಿರಿಯ ಪತ್ರಕರ್ತ ರಫೀ ಭಂಡಾರಿ ಅವರನ್ನು ಸನ್ಮಾನಿಸಲಾಗುವುದು ಎಂದು ಶಶಿ ತಾವರಗಿರಿ ತಿಳಿಸಿದರು.

ಜನರಲ್ಲಿ ನಾಟಕ ನೋಡುವ ಅಭಿರುಚಿ ಬೆಳೆಸುವುದು ಹಾಗೂ ನಾಟಕಗಳ ಮೂಲಕ ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುವುದು ಈ ನಾಟಕೋತ್ಸವದ ಮುಖ್ಯ ಉದ್ದೇಶವಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಡಾ.ಬಾಬುರಾಜೇಂದ್ರ ನಾಯಿಕ, ಅಂಬಾದಾಸ ಜೋಶಿ, ಅನಿಲ ರೆಡ್ಡಿ, ಪ್ರೇಮ ಕೆ. ಉಪಸ್ಥಿತರಿದ್ದರು.

# ಸಿಂದಗಿಯ ನೀಲಂಗಾದೇವಿ ಜಾತ್ರೆ ಸಂಪನ್ನ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ದೇವತೆ ನೀಲಂಗಾದೇವಿಯ ಪಲ್ಲಕ್ಕಿಯು ದೇವಸ್ಥಾನದಿಂದ ಹೊರ ಬರುತ್ತಿದ್ದಂತೆ ಸಾವಿರಾರು ಭಕ್ತರು ದಿಂಡರಕಿಗೈದರು. ಪಲ್ಲಕ್ಕಿ ಮಹೋತ್ಸವ ದೇವಸ್ಥಾನದಿಂದ ಹಳೆ ಬಜಾರ್ ರಸ್ತೆಯ ಮಾರ್ಗವಾಗಿ ಸ್ಥಳೀಯ ಶ್ರೀ ಬಸವಣ್ಣ ದೇವರ ಗುಡಿಗೆ ಸಾಗಿ ಬಂತು. ಮಾರ್ಗ ಮಧ್ಯದಲ್ಲಿ ಅನೇಕ ಮುತ್ತೈದರು, ಭಕ್ತರು ಆರತಿ ಬೆಳಗಿ ಆಶೀರ್ವಾದ ಪಡೆದುಕೊಂಡರು.

ಪಟ್ಟಣದ ಆರಾಧ್ಯ ದೈವ ತಾಯಿ ನೀಲಗಂಗಾದೇವಿ ಜಾತ್ರೆಯು ರವಿವಾರ ಅತ್ಯಂತ ಅರ್ಥಪೂರ್ಣ ಮತ್ತು ಅದ್ದೂರಿಯಾಗಿ ಜರುಗಿತು.

ಗೌರಿ ಹುಣ್ಣಿಮೆಯಿಂದ ಪ್ರಾರಂಭವಾದ ನೂರಾರು ಭಕ್ತರ ನಿರಹಾರ ಸೇವೆ ಪಲ್ಲಕ್ಕಿ ದೇವಸ್ಥಾನಕ್ಕೆ ಮರಳಿ ಬಂದ ನಂತರ ಮುಕ್ತಾಯಗೊಳಿಸಿದರು. ಪಲ್ಲಕ್ಕಿಗೆ



ಮಾಡಿದ ವಿವಿಧ ಹೂವಿನ ಅಲಂಕಾರ ಭಕ್ತರ ಗಮನ ಸೆಳೆಯಿತು. ಜಾತ್ರೆಯಲ್ಲಿ ಪುರವಂತರ ಸೇವೆ, ನಂದಿಕೋಲು ಸೇವೆ, ಡೊಳ್ಳು ಕುಣಿತ, ಸನಾದಿ, ಮ್ಯೂಸಿಕಲ್ ಬ್ರಾಂಡ್ ಸೇರಿದಂತೆ ವಿವಿಧ ವಾದ್ಯಗಳು ಕಂಡುಬಂದವು.

ಜಾತ್ರಾ ನೇತೃತ್ವವನ್ನು ಧರ್ಮದರ್ಶಿ ಸುನೀಲ ಶಿರೂಗೌಡ ದೇವರಮನಿ ವಹಿಸಿದ್ದರು. ಜಾತ್ರಾ ಮೆರವಣಿಗೆಯಲ್ಲಿ ಅಶೋಕಗೌಡ ದೇವರಮನೆ, ಅಶೋಕ ವಾರದ, ನೀಲಪ್ಪಗೌಡ ಬಿರಾದಾರ, ಗುಂಡಪ್ಪ ಪಡ ಗನೂರ, ದುಂಡಪ್ಪ ಸೊನ್ನದ, ಉಮೇಶ ಪಟ್ಟಣಶೆಟ್ಟಿ, ಬಾಬು ರೇಬಿನಾಳ, ಈಶಪ್ಪ ರೆಬಿನಾಳ ದಯಾನಂದ ಪತ್ತಾರ, ಡಾ. ವಿಜಯಕುಮಾರ ವಾರದ, ಮುತ್ತು ಮುಂಡೇವಾಡಗಿ, ಗೊಲ್ಲಾಳಪ್ಪ ಸಾವಳಗಿ, ಮಲ್ಲಿಕಾರ್ಜುನ ಬೋಮ್ಮಣ್ಣಿ, ದಯಾನಂದ ಇವಣಿ, ವಿಶ್ವನಾಥ ಭೈರಿ, ಶಂಕರೆಪ್ಪ ಗೋಣಿ, ಚನ್ನಪ್ಪ ಗೋಣಿ, ಬಾಬು ಕಮತಗಿ ಅಣ್ಣು ಕಿಣಗಿ, ಬಸುಗೌಡ ಪಾಟೀಲ, ಬಸವರಾಜ ಜೋಗುರ, ರವಿ ಗೌಸಾನಿ, ಅಶೋಕ ಅಲ್ಲಾಪುರ, ಮುತ್ತು ಪಟ್ಟಣಶೆಟ್ಟಿ, ಡಾ. ಶರಣಬಸವ ಜೋಗುರ, ಶ್ರೀಶೈಲ ನಂದಿಕೋಲ, ಪ್ರಕಾಶ ಗುಣಾರಿ, ಸಂತೋಷ ಪಟ್ಟಣಶೆಟ್ಟಿ, ಕಿರಣ್ ಕೋರಿ, ಸಿದ್ದಲಿಂಗ ಕಿಣಗಿ, ಪ್ರವೀಣ ಪತ್ತಾರ, ಶ್ರೀಧರ ಬೊಮ್ಮಣ್ಣಿ, ಕುಮಾರ ಕಿಣಗಿ, ಗಂಗಾಧರ ಕಿಣಗಿ, ರಾಹುಲ ಪಟ್ಟಣಶೆಟ್ಟಿ , ರಾಜು ಕಿಣಗಿ ಸೇರಿದಂತೆ ತಾಲೂಕಿನ ಸಮಸ್ತ ಭಕ್ತ ವೃಂದ ಭಾಗವಹಿಸಿದ್ದರು.

# ಅಭಿವೃದ್ಧಿ ವಿಚಾರದಲ್ಲಿ ರಾಜಕಾರಣ ಮಾಡೊಲ್ಲ :ಶಾಸಕ ಮನಗೂಳಿ

ಉದಯರಶ್ಮಿ ನ್ಯೂಸ್

ಸಿಂದಗಿ: ಕ್ಷೇತ್ರದ ಅಭಿವೃದ್ಧಿ, ನೀರಾವರಿ ಸೇರಿದಂತೆ ವಿವಿಧ ವಿಚಾರಗಳಲ್ಲಿ ನಾನು ಯಾವತ್ತೂ ರಾಜಕಾರಣ ಮಾಡುವುದಿಲ್ಲ. ನಾನೊಬ್ಬ ಪಕ್ಷಾತೀತ ಶಾಸಕ. ಕ್ಷೇತ್ರದ ಅಭಿವೃದ್ಧಿ ಹಂತ ಹಂತವಾಗಿ ಪ್ರಗತಿ ಪಥದತ್ತ ಸಾಗುತ್ತಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ರವಿವಾರದಂದು ತಾಲೂಕಿನ ಸಾಸಾಬಾಳ ಗ್ರಾಮದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ ಸಿಂದಗಿ ಹಮ್ಮಿಕೊಂಡಿರುವ ಸಾಸಬಾಳ ಎಲ್.ಟಿ ಗ್ರಾಮದಲ್ಲಿ ಜಲಜೀವನ ಮಿಷನ್ ಯೋಜನೆ ಅಡಿಯಲ್ಲಿ ಅಂದಾಜು ರೂ. 42 ಲಕ್ಷ ರೂಪಾಯಿಗಳಲ್ಲಿ ಮನೆ ಮನೆಗೆ ನೀರು ಕಾಮಗಾರಿಯ ಭೂಮಿ ಪೂಜೆಯನ್ನು ನೆರವೇರಿಸಿ ಮಾತನಾಡಿದ ಅವರು,ಈ ಕ್ಷೇತ್ರದ ಜನತೆಯ ಪರವಾಗಿ ನಾನು ಇದ್ದೇನೆ. ಚುನಾವಣೆ ಮಾಡಿದವರು ನನ್ನವರು, ಮಾಡದಿದ್ದವರೂ ನನ್ನವರು, ನಾನು ಈ ಕ್ಷೇತ್ರದ ಪ್ರತಿನಿಧಿಯಾಗಿ ಎಲ್ಲರ ಏಳಿಗೆಗೆ ಸದಾ ಸಿದ್ದನಾಗಿದ್ದೇನೆ. ತಮ್ಮ ನೂರೆಂಟು ಕಾರ್ಯಗಳಿಗೆ ನನ್ನನ್ನ ಮುಕ್ತ ಭಾವದಿಂದ ಸಂಪರ್ಕಿಸಿ ಎಲ್ಲರ ಸಮಸ್ಯೆಗಳಿಗೂ ನಾನು ಸ್ಪಂದಿಸುವ ಸಾಮಾನ್ಯ ಶಾಸಕನಿದ್ದಂತೆ. ಮೂಲಭೂತ ಸೌಕರ್ಯಗಳಲ್ಲಿ ಕುಡಿಯುವ ನೀರು ಅತ್ಯಂತ ಪ್ರಾಮುಖ್ಯತೆಯನ್ನು ಪಡೆದುಕೊಂಡಿದೆ. ಗ್ರಾಮದ ಪ್ರತಿ ಮನೆಮನೆಗಳಿಗೂ ನೀರನ್ನ ಹರಿಸುವ ಕಾರ್ಯ ಶ್ರೇಷ್ಠವಾಗಿರುವ ಕಾರ್ಯವಾಗಿದೆ. ಈ ಕಾಮಗಾರಿ ವ್ಯವಸ್ಥಿತವಾಗಿ ನಡೆದು ಗ್ರಾಮಸ್ಥರ ಪಾಲಿಗೆ ಉತ್ತಮ ರೀತಿಯಲ್ಲಿ ನೆರವಾಗಬೇಕು. ಈ ಕ್ಷೇತ್ರದ ಅಭಿವೃದ್ಧಿಗೆ ಇನ್ನೂ 108 ಯೋಜನೆಗಳ ಕನಸುಗಳನ್ನು ಕಂಡಿದ್ದೇನೆ ಆ ನನ್ನ ಎಲ್ಲ ಕನಸುಗಳು ನಾನು ಈಡೇರಿಕೆ ಮಾಡೇ ಮಾಡುತ್ತೇನೆ. ಜನತೆ ನಮ್ಮ ಅಭಿವೃದ್ಧಿಪರ ಕಾರ್ಯಗಳಿಗೆ ಸದಾ ಮಾರ್ಗದರ್ಶನ, ಸರಕಾರ ನೀಡಬೇಕು ಎಂದರು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ ಸೈಫನ ಕೊರವಾರ, ಧರ್ಮರಾಯ ಒಡೆಯರ, ಮಲ್ಲಣ್ಣ ಸಾಲಿ, ಬಸವರಾಜ ಮಾರಲಭಾವಿ. ಧರ್ಮಣ್ಣ ರಾಠೋಡ, ಬಸವರಾಜ ತೆಲ್ಲೂರ, ಬಾಬುಗೌಡ ಬಿರಾದಾರ, ನಿಂಗನಗೌಡ ಡವಳರ, ನಾಡಗೌಡ ಪೊಲೀಸ, ಮುದ್ದೇಗೌಡ ಬಿರಾದಾರ, ಶಿವು ಕುದರಗೊಂಡ,



ಶರಣಗೌಡ ಬಿರಾದಾರ ಸೇರಿದಂತೆ ರಾಜಕೀಯ ಮುಖಂಡರು, ಗ್ರಾಮಸ್ಥರು ಹಾಗೂ ಗ್ರಾಮ ಪಂಚಾಯತಿ ಸದ್ಯಸರು ಉಪಸ್ಥಿತರಿದ್ದರು.

# ಸಿಎಂ ಸಿದ್ದರಾಮಯ್ಯ ನಗೆಭಾಗ್ಯ ಕೊಡಲಿ :ಪನ್ನಗ ಶಯನಂ ಮನವಿ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ನಾವು ಕಳೆದ 20 ವರ್ಷಗಳಿಂದ ರಾಜ್ಯದ ವಿವಿಧೆಡೆ ನಗೆ ಸಮ್ಮೇಳನ ಮಾಡುತ್ತಾ ಬರುತ್ತಿದ್ದೇವೆ. ಈಚೆಗೆ ನಗೆ ಸಮ್ಮೇಳನ ಆಯೋಜನೆ ಮಾಡಲು ಯಾವ ಜಿಲ್ಲೆಯವರು ಅಷ್ಟಾಗಿ ಮುಂದೆ ಬರುತ್ತಿಲ್ಲ. ಇದರಿಂದಾಗಿ ಮುಂದಿನ ರಾಜ್ಯ ಬಜೆಟ್ನಲ್ಲಿ ನಗೆ ಸಮ್ಮೇಳನಕ್ಕೆ ರಾಜ್ಯ ಸರ್ಕಾರದಿಂದ ಕನಿಷ್ಠ ಒಂದು ಕೋಟಿ ರೂಪಾಯಿಯನ್ನು ಅನುದಾನ ನೀಡುವ ಮೂಲಕ ಸಿಎಂ ಸಿದ್ದರಾಮಯ್ಯನವರು ರಾಜ್ಯದ ಜನತೆಗೆ ನಗೆ ಭಾಗ್ಯವನ್ನು ನೀಡುವಂತೆ ಮನವಿ ಮಾಡಿಕೊಳ್ಳುವುದಾಗಿ ಕರ್ನಾಟಕ ರಾಜ್ಯ ನಗೆಯೋಗ ಕೂಟಗಳ ಒಕ್ಕೂಟದ ಅಧ್ಯಕ್ಷ ಪನ್ನಗ ಶಯನಂ ಹೇಳಿದರು.



ಪಟ್ಟಣದ ಬಸವ ಭವನದಲ್ಲಿ ಕರ್ನಾಟಕ ರಾಜ್ಯ ನಗೆಯೋಗ ಕೂಟಗಳ ಒಕ್ಕೂಟ ಹಾಗೂ ಸ್ಥಳೀಯ ಬಸವೇಶ್ವರ ನಗೆಯೋಗ ಕೂಟದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ 20 ನೇ ನಗೆ ಸಮ್ಮೇಳನದ ಎರಡನೇ ದಿನ ಭಾನುವಾರದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆರಂಭದಲ್ಲಿ ನಗೆ ಸಮ್ಮೇಳನ ಆಯೋಜನೆ ಮಾಡುವಾಗ ಸಾಕಷ್ಟು ಪ್ರತಿನಿಧಿಗಳು ಶುಲ್ಕ ತುಂಬಿ ಬರುತ್ತಿದ್ದರು. ಈಚೆಗೆ ಸಮ್ಮೇಳನ ಆಯೋಜನೆ ಮಾಡಲು ಹೆಚ್ಚಾಗಿ ಮುಂದೆ ಬರುತ್ತಿಲ್ಲ. ರಾಜ್ಯ ಸರ್ಕಾರ ನಗೆ ಸಮ್ಮೇಳನಕ್ಕೆ ಅನುದಾನ ನೀಡಿದರೆ ಯಾವುದೇ ಪ್ರತಿನಿಧಿಗಳಿಂದ ಶುಲ್ಕ ಪಡೆಯದೇ ಸಮ್ಮೇಳನವನ್ನು ಆಯೋಜನೆ ಮಾಡಲು ಸಾಧ್ಯ. ಜೀವನದಲ್ಲಿ ನಗೆ ಬಹುಮೌಲ್ಯಯುತವಾಗಿದೆ. ಇಂತಹ ನಗೆಯು ಪ್ರತಿಯೊಬ್ಬರ ಜೀವನದಲ್ಲಿ ಇದ್ದರೆ ಅವರ ಜೀವನ ಯಾವಾಗಲೂ ಸಂತಸಮಯವಾಗಿ ಇರುತ್ತದೆ. ನಗೆ ಸಮ್ಮೇಳನಕ್ಕೆ ಸರ್ಕಾರ ಅನುದಾನ ಬಿಡುಗಡೆ ಮಾಡಿದರೆ ಅನುಕೂಲವಾಗುತ್ತದೆ ಎಂದು ಅನೇಕ ಸಚಿವರ ಮುಂದೆ ಈ ಕುರಿತು ಮಾತನಾಡಿದ್ದೇನೆ. ಅವ–ರಿಂದ ಸಕಾರಾತ್ಮಕ ಸ್ಪಂದನೆ ಸಿಕ್ಕಿದೆ. ಸಿಎಂ ಸಿದ್ದರಾಮಯ್ಯನವರು ಅನೇಕ ಭಾಗ್ಯಗಳನ್ನು ನಾಡಿನ ಜನತೆಗೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ನಾಡಿನ ಜನತೆಗೆ ನಗೆ ಭಾಗ್ಯವನ್ನು ನೀಡಲು ನಮ್ಮ ನಗೆಕೂಟದಿಂದ ಮನವಿ ಸಲ್ಲಿಸಿ ಪ್ರತಿ ವರ್ಷ ನಗೆ ಸಮ್ಮೇಳನಕ್ಕೆ ಬಜೆಟ್ ನಲ್ಲಿ ಅನುದಾನ ನೀಡುವಂತೆ ರಾಜ್ಯದ ಎಲ್ಲ ನಗೆಕೂಟಗಳ ಸದಸ್ಯರ ಸಹಿಯೊಂದಿಗೆ ಮುಂದಿನ ದಿನಗಳಲ್ಲಿ ಮನವಿ ಸಲ್ಲಿಸುವುದಾಗಿ ಹೇಳಿದರು.

ಜಾನಪದ ಸಾಹಿತಿ, ಸಿಪಿಐ ಜ್ಯೋತಿರ್ಲಿಂಗ ಹೊನ್ನಾಕಟ್ಟಿ ಮಾತನಾಡಿ, ಇಂದಿನ ತಂತ್ರಜ್ಞಾನ ಯುಗದಲ್ಲಿ ನಗೆ ಬಹಳ ಕಡಿಮೆಯಾಗುತ್ತಿದೆ. ಅಲ್ಲದೇ ಸಂಬಂಧಗಳು ಸಹ ಕಡಿಮೆಯಾಗುತ್ತಿರುವುದು ವಿಷಾದಕರ. ಹಾಸ್ಯ ಎಲ್ಲೆಡೆ ಇರುತ್ತದೆ ಅನ್ನುವದಕ್ಕೆ ಜಗಳದಲ್ಲಿಯೂ ಹಾಸ್ಯ ಇದೆ ಎನ್ನುವುದಕ್ಕೆ ಗಂಡ–ಹೆಂಡತಿ ಪ್ರಸಂಗ ಹೇಳುವ ಮೂಲಕ ಸಭಿಕರನ್ನು ನಗೆಗಡಲಲ್ಲಿ ತೇಲಿಸಿದ ಅವರು, ಜನಪದವು ಸಾಹಿತ್ಯಕ್ಕೆ ತಾಯಿ ಬೇರು. ಇಂತಹ ಜನಪದ ಸಾಹಿತ್ಯದಲ್ಲಿ ಜೀವನದ ಸಂಸ್ಕಾರವಿದೆ. ಜನಪದ ಸಾಹಿತ್ಯ ಎಂದಿಗೂ ಹಳಸುವುದಿಲ್ಲ. ಜನಪದ ಸಾಹಿತ್ಯದ ಅನೇಕ ಗೀತೆಗಳನ್ನು ಸುಶ್ರಾವ್ಯವಾಗಿ ಹಾಡುವ ಮೂಲಕ ಸಭಿಕರನ್ನು ಮನಸೂರೆಗೊಂಡರು.

ವಿಪಿಕೆಪಿಎಸ್ ಬ್ಯಾಂಕಿನ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ ಮಾತನಾಡಿ, ಜಗತ್ತಿನ ಯಾವ ಪ್ರಾಣಿಗಳಿಗೂ ಭಗವಂತ ನಗೆ ಎಂಬುವದನ್ನು ಕೊಟ್ಟಿಲ್ಲ. ಮನುಷ್ಯನಿಗೆ ಮಾತ್ರ ನಗೆಯನ್ನು ಭಗವಂತ ನೀಡಿದ್ದಾರೆ. ಪ್ರತಿಯೊಬ್ಬರು ಜೀವನದಲ್ಲಿ ನಗುತ್ತಾ ಉತ್ತಮ ಜೀವನ ಸಾಗಿಸಬೇಕೆಂದರು.

ನಗು ಮಹಾ ಮೆರವಣಿಗೆಗೆ ಚಾಲನೆ ನೀಡಿದ್ದ ತಹಸೀಲ್ದಾರ ವೈ. ಎಸ್.ಸೋಮನಕಟ್ಟಿ ಮಾತನಾಡಿ, ಹಾಸ್ಯದ ಕುರಿತು ಸಾಕಷ್ಟು ಸಾಹಿತ್ಯವಿದೆ. ಡಿವಿಜಿಯವರು ತಮ್ಮ ಕಗ್ಗಿನಲ್ಲಿ ನಗೆ ಮಹತ್ವ ಹೇಳಿದ್ದಾರೆ. ನಾವು ಜೀವನದಲ್ಲಿ ಎಷ್ಟು ನಗುತ್ತೇವೆಯೋ ಅಷ್ಟು ಆಯುಷ್ಯ ಹೆಚ್ಚಾಗುತ್ತದೆ ಎಂದು ಹಿರಿಯರು ಹೇಳಿದ್ದು ನಗುವಿನ ಮಹತ್ವ ಅರಿಯಬಹುದು. ಜೀವನದಲ್ಲಿ ಸದಾ ಹಸನ್ಮುಖಿಯಾಗುವ ಮೂಲಕ ಜೀವನದಲ್ಲಿರುವ ತೊಂದರೆಗಳನ್ನು ಬಗೆಹರಿಸೋಣವೆಂದರು.

ಸಾನಿಧ್ಯ ವಹಿಸಿದ್ದ ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಜೀವನದಲ್ಲಿ ಉತ್ತಮ ಆಹಾರ, ಉತ್ತಮ ನಿದ್ದೆ, ಉತ್ತಮ ಸ್ನೇಹಿತ, ಪ್ರತಿನಿತ್ಯ ಯೋಗ ಇವು ಔಷಧವಿದ್ದಂತೆ ಹೇಳುವಂತೆ ನಗೆಯು ಸಹ ಜೀವನಕ್ಕೆ ಉತ್ತಮ ಔಷಧವಾಗಿದೆ. ಇಂದಿನ ಒತ್ತಡದ ಜೀವನದಲ್ಲಿ ನಗೆ ಮಾಯವಾಗುತ್ತಿದೆ. ಎಂದಿಗೂ ನಗೆಯನ್ನು ಕಳೆದುಕೊಳ್ಳಬಾರದು. ಜೀವನದಲ್ಲಿ ನಗೆಯಿದ್ದರೆ ಮಾತ್ರ ಒಳ್ಳೆಯ ಜೀವನ ನಮ್ಮದಾಗುತ್ತದೆ ಎಂಬುವದನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕೆಂದರು.

ವೇದಿಕೆಯಲ್ಲಿ ಸಿದ್ದಲಿಂಗ ಸ್ವಾಮೀಜಿ, ರಾಜ್ಯ ನಗೆಯೋಗ ಕೂಟದ ಅಧ್ಯಕ್ಷ ಪ್ರೊ.ಪಿ.ಸದಾಶಿವ, ಸಮ್ಮೇಳನದ ಅಧ್ಯಕ್ಷ ಶಿವಯ್ಯ ಹಿರೇಮಠ, ಮುಖಂಡರಾದ ಬಿ.ಕೆ.ಕಲ್ಲೂರ, ಬಸವರಾಜ ಹಾ–ರಿವಾಳ, ಸಂಗಮೇಶ ಓಲೇಕಾರ, ಬಸಣ್ಣ ದೇಸಾಯಿ, ಅಶೋಕ ಹಾರಿವಾಳ, ಸುಭಾಸ ಚಕ್ರಮನಿ, ಅಶೋಕ ಗುಡದಿನ್ನಿ, ಶಿವಾನಂದ ಮಂಗಾನವರ, ವಿವಿಧ ನಗೆಕೂಟದ ಸದಸ್ಯರಾದ ಕುಸುಮಾ, ನಳಿನಾಕ್ಷಿ, ಸುಮಾ ಮೂಲಿಮನಿ, ಪಾರ್ವತಿ ಶೆಟ್ಟಿ ಇತರರು ಇದ್ದರು. ಬಿ.ವ್ಹಿ.ಚಕ್ರಮನಿ ಸ್ವಾಗತಿಸಿದರು. ಅಶೋಕ ಹಂಚಲಿ, ಎಸ್.ಬಿ.ದಳವಾಯಿ, ಬಿ.ಬಿ.ಚಿಂಚೋಳಿ ನಿರೂಪಿಸಿದರು. ಬಸವರಾಜ ಚಿಂಚೋಳಿ ವಂದಿಸಿದರು. ನಂತರ ವಿವಿಧ ನಗೆಯೋಗ ಕೂಟದ ಸದಸ್ಯ–ರಿಂದ ಮನರಂಜನಾ ಕಾರ್ಯಕ್ರಮ ಜರುಗಿದವು.

ಮೆರವಣಿಗೆ: ಕಾರ್ಯಕ್ರಮಕ್ಕೂ ಮುನ್ನ ಬಸವೇಶ್ವರ ದೇವಸ್ಥಾನ ಮುಂಭಾಗ ನಗು ಮಹಾ ಮೆರವಣಿಗೆ, ಸಮ್ಮೇಳನಾಧ್ಯಕ್ಷ ಶಿವಯ್ಯ ಹಿರೇಮಠ ಅವರ ಮೆರವಣಿಗೆಗೆ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಚಾಲನೆ ನೀಡಿದರು. ನಗು ಮಹಾ ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾ ತಂಡ,ಕುಂಭ ಮೇಳದೊಂದಿಗೆ ರಾಜ್ಯದ ವಿವಿಧೆಡೆಗಳಿಂದ ಆಗಮಿಸಿದ್ದ ಪ್ರತಿನಿಧಿಗಳು ವಿವಿಧ ವೇಷಭೂಷಣಗಳೊಂದಿಗೆ ಭಾಗವಹಿಸುವ ಮೂಲಕ ಗಮನ ಸೆಳೆದರು. ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜರುಗಿತು.

## ನಗೆ ಬಗ್ಗೆ ಹೆಚ್ಚು ಬೆಳಕು ಚೆಲ್ಲುವಂತಾಗಬೇಕು :ಕಲಘಟಗಿ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಬಸವೇಶ್ವರ ಜನ್ಮಸ್ಥಳ ಬಸವನಬಾಗೇವಾಡಿಯಲ್ಲಿ ಎರಡು ದಿನಗಳ ಕಾಲ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ 20 ನೇ ನಗೆ ಸಮ್ಮೇಳನದಲ್ಲಿ ಹಿಂದಿನ–ಇಂದಿನ–ಮುಂದಿನ ನಗುವಿನ ಕುರಿತು ಹೆಚ್ಚು ಚರ್ಚೆಯಾಗದೇ ಸಂಘಟಕರು ಸನ್ಮಾನಕ್ಕೆ ಹೆಚ್ಚು ಒತ್ತು ಕೊಟ್ಟಿರುವುದು ನಮಗೆ ನಿರಾಶೆ ಉಂಟು ಮಾಡಿದೆ ಎಂದು ಬೆಂಗಳೂರಿನಿಂದ ಆಗಮಿಸಿದ್ದ ಹಿರಿಯ ಜೀವಿ, ಸಮ್ಮೇಳನದ ಪ್ರತಿನಿಧಿ, ನಿವೃತ್ತ ಖಾದಿಗ್ರಾಮೋದ್ಯೋಗ ನೌಕರ ಸುರೇಶ ಕಲಘಟ್ಟಗಿ ಹೇಳಿದರು.



ಅವರು ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ನಗೆಕೂಟ 1998 ರಲ್ಲಿ ಸ್ಥಾಪನೆಯಾದಗಿನಿಂದಲೂ ನಾನು ನಗೆಕೂಟದ ಸದಸ್ಯನಾಗಿದ್ದೇನೆ. ರಾಜ್ಯದ ವಿವಿಧೆಡೆಗಳಲ್ಲಿ ಪ್ರತಿ ವರ್ಷ ನಡೆಯುವ ನಗೆ ಸಮ್ಮೇಳನಕ್ಕೆ ನಿರಂತರವಾಗಿ ಹೋಗುತ್ತಿದ್ದೇನೆ. ಬಸವೇಶ್ವರ ಜನ್ಮಸ್ಥಳದಲ್ಲಿ ನಡೆಯುವ ಈ ರಾಜ್ಯ ಸಮ್ಮೇಳನಕ್ಕೆ ಬರುವ ಮೂಲಕ ಬಸವ ಜನ್ಮಸ್ಥಳ ನೋಡುವ ಜೊತೆಗೆ ನಗೆ ಕುರಿತ ಚಿಂತನ–ಮಂಥನದಲ್ಲಿ ಭಾಗವಹಿಸಲು ಉತ್ಸಾಹದಿಂದ ಬಂದಿದ್ದೆ. ಈ ಸಮ್ಮೇಳನದಲ್ಲಿ ಶೇ. 30 ರಷ್ಟು ಮಾತ್ರ ನಗೆಗೆ ಒತ್ತು ನೀಡಲಾಗಿ–ತ್ತು. ನಾನು ಮೂಲತಃ ಧಾರವಾಡದವನು. ನಾನು 60 ವರ್ಷದಿಂದ ಬೆಂಗಳೂರಿನಲ್ಲಿದ್ದೇನೆ. ರಾಜ್ಯದಲ್ಲಿ ಸು. 200 ನಗೆಕೂಟಗಳಿವೆ. ದೇಶದಲ್ಲಿ ಮದನ ಕಟಾ–ರಿಯಾ ಎಂಬುವವರು ಮೊದಲು ಮುಂಬಯಿಯಲ್ಲಿ ನಗೆಕೂಟವನ್ನು ಹುಟ್ಟುಹಾಕಿದರು. ಬೆಂಗಳೂರಿನ ಜಯನಗರದಲ್ಲಿರುವ ಮಾಧವನ ಪಾರ್ಕಿನಲ್ಲಿ ಮೊದಲು ನಗೆಕೂಟ ಆರಂಭವಾಯಿತು. ನಮ್ಮ ಕತ್ರಿಗುಪ್ ಪ್ರದೇಶದಲ್ಲಿ ಪ್ರತಿನಿತ್ಯ ಬೆಳಗ್ಗೆ ನಗೆಕೂಟದ ಎಲ್ಲ ಸದಸ್ಯರು ಕೂಡಿಕೊಂಡು ನಗೆಕೂಟವನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿದ್ದೇವೆ. ನಗೆಕೂಟದಿಂದ ಆರೋಗ್ಯ ವೃದ್ಧಿಯಾಗುವ ಜೊತೆಗೆ ಸಂಬಂಧಗಳು ವೃದ್ಧಿಯಾಗುತ್ತವೆ. ನಮ್ಮ ಕೂಟದಲ್ಲಿ ಹೆಚ್ಚಾಗಿ ಹಿರಿಯರು ಇದ್ದಾರೆ. ಕೂಟದ ಪ್ರತಿಯೊಬ್ಬರ ಕಾರ್ಯಕ್ರಮದಲ್ಲಿ ಎಲ್ಲರೂ ಭಾಗಿಯಾಗುವ ಮೂಲಕ ಜೀವನವನ್ನು ಸಂತಸವಾಗಿ ಕಳೆಯುತ್ತಿದ್ದೇವೆ. ನಮ್ಮ ಕೂಟದಿಂದ ಸಾಮಾಜಿಕ ಕಾರ್ಯಗಳನ್ನು ಹಮ್ಮಿಕೊಳ್ಳುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ನಗೆಕೂಟದಿಂದ ಜನರಲ್ಲಿ ಬಾಂಧವ್ಯ ವೃದ್ಧಿಯಾಗುತ್ತದೆ ಎಂದು ಅಭಿಪ್ರಾಯ ಪಟ್ಟರು.

# ಕೊಲ್ಹಾರದಲ್ಲಿ ಬಿಜೆಪಿ ವಿಜಯೋತ್ಸವ



ಉದಯರಶ್ಮಿ ನ್ಯೂಸ್

ಕೊಲ್ಹಾರ: ದೇಶದಲ್ಲಿ ನಡೆಯುವ ಅನೇಕ ಚುನಾವಣೆಗಳಲ್ಲಿ ಮತದಾರ ಯಾವ ರೀತಿ ತೀರ್ಪು ಕೊಡುತ್ತಾರೆ ಎನ್ನುವದನ್ನು ಎಂಥಹ ರಾಜಕೀಯ ವಿಶ್ಲೇಷಕರಿಗೂ ತಜ್ಞರಿಗೂ ನೇತಾರ–ರಿಗೂ ಸಿಗದ ಆಶಾಭಾವನೆಯಾಗಿದೆ ಎಂದು ಮಾಜಿ ಸಚಿವ ಎಸ್.ಕೆ.ಬೆಳ್ಳುಬ್ಬಿ ಹೇಳಿದರು.

ಪಟ್ಟಣದ ಅಗಸಿಯ ಹತ್ತಿರ ಮೂರು ರಾಜ್ಯಗಳಲ್ಲಿ ಭಾರತೀಯ ಜನತಾ ಪಕ್ಷವು ಸಂಪೂರ್ಣ ಬಹುಮತದೊಂದಿಗೆ ಅಧಿಕಾರದ ಚುಕ್ಕಾನೆ ಹಿಡಿಯಲು ಕಾರಣೀಕರ್ತರಾದ ಮತದಾರ ಬಂಧುಗಳಿಗೆ ಕೃತಜ್ಞತೆ ಸಲ್ಲಿಸುವ ಹಾಗೂ ವಿಜಯೋತ್ಸವ ಸಮಾರಂಭದಲ್ಲಿ ಜನತೆಯನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಕಾರ್ಯಕರ್ತರು ಪರಸ್ಪರ ಸಿಹಿ ಸವಿಯುವ ಮೂಲಕ ಜನತೆಗೆ ವಿತರಣೆ ಮಾಡಿ ಪಟಾಕಿ ಸಿಡಿಸಿ ಸಂಭ್ರಮಿಸಿದರು.

ದೇಶದ ರಾಜಕಾರಣದಲ್ಲಿ ಸ್ವಚ್ಛಂದ ರಾಜಕೀಯ ವ್ಯಕ್ತಿಗಳಾಗಿ ಮನೆ ಮಠ ಎನ್ನದೇ ಭಾರತೀಯರ ಅಭಿವೃದ್ದಿಗಾಗಿ ಸದಾ ಶ್ರಮಿಸುತ್ತಿರುವ ವಿಶ್ವದ ಭೂಪಟದಲ್ಲಿ ಭಾರತದ ಕೀರ್ತಿ ಪತಾಕೆಯನ್ನು ಉತ್ತುಂಗದ ಶಿಖರಕ್ಕೆ ಕೊಂಡೊಯ್ಯುತ್ತಿರುವ ಮಹಾನ ನಾಯಕ ನರೇಂದ್ರ ಮೋದಿಯವರ ನಾಯಕತ್ವ ಮುಂದಿನ ಲೋಕಸಭಾ ಚುಣಾವಣೆಯಲ್ಲಿಯೂ ಪ್ರಜ್ವಲಿಸುವ ಆಶಾಭಾವನೆಯನ್ನು ಈ ಚುನಾವಣೆ ತೀರ್ಪು ದಿಕ್ಸೂಚಿಯಾಗಿದೆ ಎಂದು ಎಸ್.ಕೆ.ಬೆಳ್ಳುಬ್ಬಿ ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮುಖಂಡ ಟಿ.ಟಿ.ಹಗೇದಾಳ, ಚಂದ್ರಶೇಖರಯ್ಯ ಗಣಕುಮಾರ, ವಿನೀತಕುಮಾರ ದೇಸಾಯಿ, ನೀವೃತ್ತ ಸೈನಿಕ ಐ.ಜಿ.ಬಿರಾದಾರ, ಪಟ್ಟಣ ಪಂಚಾಯತಿ ಸದಸ್ಯರಾದ ಬಾಬು ಭಜಂತ್ರಿ, ಶ್ರೀಶೈಲ ಅಥಣಿ, ಅಪ್ಪಶಿ ಮಟ್ಯಾಳ, ಸಂಗಪ್ಪ ಹುಚ್ಚಪ್ಪಗೋಳ, ವೀರಭದ್ರಪ್ಪ ಬಾಗಿ, ಬಸಯ್ಯ ಮಠಪತಿ, ಗುರಲಿಂಗಪ್ಪ ಮಟ್ಯಾಳ, ಮಲ್ಲಿಕಾರ್ಜುನ ಬೆಳ್ಳುಬ್ಬಿ, ಅಶೋಕ ಗಿಡ್ಡಪ್ಪಗೋಳ, ಡೋಂಗ್ರಿ ಕಟಬರ, ಅನೀಲ ಬಾಟಿ, ಬಸಪ್ಪ ಏಳಗಂಟಿ ಅನೇಕ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವದಲ್ಲಿ ಪಾಲ್ಗೊಂಡಿದ್ದರು.

# ಪರಿಣಾಮಕಾರಿ ಬೋಧನೆಗೆ ಸಹಪಠ್ಯ ಚಟುವಟಿಕೆ ಅಗತ್ಯ

ಉದಯರಶ್ಮಿ ನ್ಯೂಸ್

ವಿಜಯಪುರ: ಮಕ್ಕಳಿಗೆ ಪರಿಣಾಮಕಾರಿಯಾಗಿ ಬೋಧನೆ ಮಾಡಲು ಪಠ್ಯದ ಜೊತೆಗೆ ಸಹಪಠ್ಯ ಚಟುವಟಿಕೆ ಅಗತ್ಯವಾಗಿವೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲಾ ಉಪನಿರ್ದೇಶಕ ಎನ್.ಎಚ್.ನಾಗೂರ ಹೇಳಿದರು.




ನಗರದ ಮರಾಠಾ ವಿಧ್ಯಾಲಯದಲ್ಲಿ ಶನಿವಾರ ನಡೆದ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಕರ್ನಾಟಕ ರಾಜ್ಯ ವಿಧ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ಶಿಕ್ಷಕರ ಕಲ್ಯಾಣ ನಿಧಿ ಬೆಂಗಳೂರ, ಜಿಲ್ಲಾ ಪಂಚಾಯತಿ ವಿಜಯಪುರ, ಉಪನಿರ್ದೇಶಕರ ಕಾರ್ಯಾಲಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಕರಿಗಾಗಿ ನಡೆದ ಜಿಲ್ಲಾ ಮಟ್ಟದ 2023–24ನೇ ಸಾಲಿನ ಸಹಪಠ್ಯ ಚಟುವಟಿಕೆ ಸ್ಪರ್ಧೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರು ಪಠ್ಯ ಬೋಧನೆ ಜೊತೆಗೆ ಮಕ್ಕಳಿಗೆ ಪಠ್ಯೇತರ ಚಟುವಟಿ–ಕೆ ಮೂಲಕ ಕಲಿಸುವದರಿಂದ ಪರಿಣಾಮಕಾರಿ ಕಲಿಕೆಯಾಗುವದು. ಶಿಕ್ಷಕರ ವಿಶೇಷ ಪ್ರತಿಭೆ ಹಾಗೂ ಕೌಶಲ್ಯ ಹೊರಹಾಕಲು ಈ ಸಹಪಠ್ಯ ಚಟುವಟಿಕೆ ಸ್ಪರ್ಧೆ ಏರ್ಪಡಿಸಲಾಗಿದೆ. ಸ್ಪರ್ಧಾತ್ಮಕ ಯುಗದಲ್ಲಿ ಇಂತಹ ಪಠ್ಯೇತರ ಚಟುವಟಿಕೆ ಏರ್ಪಡಿಸುವದ–ರಿಂದ ಶಿಕ್ಷಕರಿಗೆ ಅನೂಕೂಲ ಎಂದರು.

ಕರ್ನಾಟಕ ರಾಜ್ಯ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾದ್ಯಕ್ಷ ಸುರೇಶ ಶಡಶ್ಯಾಳ ಮಾತನಾಡಿ ಪರಿಣಾಮಕಾರಿ ಬೋಧನೆ ಮಾಡಲು ಶಿಕ್ಷಕರಿಗೆ ಉತ್ತೇಜನ ನೀಡಲು ಈ ಸಹಪಠ್ಯ ಚಟುವಟಿಕೆ ಸಹಕಾರಿಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ನೌಕರರ ಸಂಘದ ಜಿಲ್ಲಾ ಖಜಾಂಚಿ ಜುಬೇರ ಕೆರೂರ, ಕನ್ನಡ ವಿಷಯ ಪರಿವೀಕ್ಷಕಿ ಎಸ್. ಎ.ಅಳ್ಳಗಿ, ವಿ.ಆರ್. ಹಿರೇಮಠ, ಡಿವೈಪಿಸಿ ಟಿ.ಎಸ್. ಕೋಲಾರ, ಪ್ರೌಢ ಶಾಲಾ ಸಹಶಿಕ್ಷಕ ಸಂಘದ ಜಿಲ್ಲಾಧ್ಯಕ್ಷ ಶಿವರಾಜ್ ಬಿರಾದಾರ, ಎನ್ಪಿಎಸ್ ನೌಕರ ಸಂಘದ ಜಿಲಾಧ್ಯಕ್ಷ ಮಲ್ಲನಗೌಡ ಹಡಲಗೇರಿ, ಮಹಾಂತೇಶ ಅಂಗಡಿ, ಶ್ರೀರಾಮ ಭಟ್ ಇದ್ದರು.

# ತೆಲಗಿಯಲ್ಲಿ ಸಂತ್ರಸ್ತ ರೈತರಿಂದ ಚಿಂತನ–ಮಂಥನ ಸಭೆ

ಉದಯರಶ್ಮಿ ನ್ಯೂಸ್

ಕೊಲ್ಹಾರ: ಕೂಡಗಿ ಭಾಗದಲ್ಲಿ ಉಷ್ಣ ವಿದ್ಯುತ್ ಸ್ಥಾವರ ನಿರ್ಮಾಣ–ಕ್ಕಾಗಿ ಎನ್ಟಿಪಿಸಿಗೆ ಜಮೀನು ಕಳೆದುಕೊಂಡಿದ್ದ ಈ ಭಾಗದ ಸಂತ್ರಸ್ತ ರೈತರು ಮತ್ತೊಮ್ಮೆ ಧರಣಿಯತ್ತ ಮುಖ ಮಾಡುವ ಸಾಧ್ಯತೆ ದಟ್ಟವಾಗಿದೆ. ತಾಲೂಕಿನ ತೆಲಗಿಯ ಸದ್ಗುರು ಸದಾನಂದ ಆಶ್ರಮದಲ್ಲಿ ಶನಿವಾರ ಸಭೆ ನಡೆಸಿದ ಸಂತ್ರಸ್ತ ರೈತರು ಈ ಕುರಿತು ಚಿಂತನ–ಮಂಥನ ನಡೆಸಿದರು.



ಈಗಾಗಲೇ ನ.6 ರಂದು ಎನ್ಟಿಪಿಸಿ ಎಚ್ಆರ್ ಸಭಾಂಗಣದಲ್ಲಿ ನಡೆದ ಗ್ರಾಮಾಭಿವೃದ್ಧಿ ಸಲಹಾ ಸಮಿತಿ (ವಿಡಿಎಸಿ) ಸಭೆಯಲ್ಲಿ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಗಮನಕ್ಕೆ ರೈತರ ಅಹವಾಲನ್ನು ಸಲ್ಲಿಸಲಾಗಿತ್ತು. ಸಭೆ ಮುಗಿದು ಮತ್ತೆ ತಿಂಗಳಾಗುತ್ತ ಬಂದರೂ ಇದುವರೆಗೂ ಏನೊಂದೂ ಪ್ರತಿಕ್ರಿಯೆ ಜಿಲ್ಲಾಧಿಕಾರಿಗಳಿಂದಾಗಲಿ, ಎನ್ಟಿಪಿಸಿ ಅಧಿಕಾರಿಗಳಿಂದಾಗಲಿ ಬಂದಿಲ್ಲ. ಹೀಗಾಗಿ ಡಿ.4 ರಂದು ಮತ್ತೊಂದು ಬಾರಿ ಜಿಲ್ಲಾಧಿಕಾರಿ ಜತೆಗೆ ಮಾತನಾಡಿ ಸಂತ್ರಸ್ತ ರೈತರ ಬೇಡಿಕೆಗಳ ಕುರಿತು ಮನವರಿಕೆ ಮಾಡಲಾಗುವುದು. ಅದಾಗ್ಯೂ ಯಾವುದೇ ಸ್ಪಂದನೆ ದೊರಕದಿದ್ದರೆ ಎನ್ಟಿಪಿಸಿ ಮುಖ್ಯ ಪ್ರವೇಶ ದ್ವಾರದ ಎದುರು ಶಾಂತಿಯುತ ಪ್ರತಿಭಟನೆಗೆ ಮುಂದಾಗುವುದು ಅನಿವಾರ್ಯವಾದೀತೆಂದು ಸಂತ್ರಸ್ತ ರೈತ ಮುಖಂಡರಾದ ಮಲ್ಲಿಕಾರ್ಜುನ ವೀರಣ್ಣವರ, ದಯಾನಂದ ಹೆಬ್ಬಾಳ ಸಭೆಗೆ ತಿಳಿಸಿದರು.

ಗೊಳಸಂಗಿ ಗ್ರಾಪಂ ಅಧ್ಯಕ್ಷ ಕೇಶವ ಪವಾರ, ತೆಲಗಿ ಗ್ರಾಪಂ ಅಧ್ಯಕ್ಷ ಅರವಿಂದ ಕೊಪ್ಪದ, ಪ್ರಮುಖರಾದ ರಾಘವೇಂದ್ರ ಕುಲಕರ್ಣಿ, ಸುರೇಶ ದಳವಾಯಿ, ಮಹಾಂತೇಶ ಕಮತಗಿ, ಎಸ್.ಜಿ. ವಸ್ತ್ರದ, ಮಲ್ಲೇಶ ಹಂಡಗಿ, ಮಸ್ತಾನಸಾಬ ಜಾಗೀರದಾರ, ಹನುಮಂತ ಯಳಮೇಲಿ, ವಿವೇಕ ಪಾಟೀಲ, ದಸ್ತಗೀರಸಾಬ ಗಡೇದ, ರಾಯಪ್ಪ ಯಾಳಗಿ, ಹೊನ್ನಪ್ಪ ಅಂಗಡಿ ಮತ್ತಿತರರು ಇದ್ದರು.

# "ಕಬ್ಬ ಸಂಕಲ್ಪ" ಶಾಲಾ ವಿದ್ಯಾರ್ಥಿಗಳ ಕ್ರೀಡಾ ಲೋಕ

ಉದಯರಶ್ಮಿ ನ್ಯೂಸ್

ವಿಜಯಪುರ: ಡಾ.ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ವಿಜಯಪುರ ಜಿಲ್ಲೆ "ಕಬ್ಸ ಸಂಕಲ್ಪ ಸ್ಕೂಲ್" ವಿದ್ಯಾರ್ಥಿಗಳು

ವಿಶೇಷ ಹಾಗೂ ವಿಶಿಷ್ಟವಾಗಿ ಕ್ರೀಡೆಯನ್ನು ಹಮ್ಮಿಕೊಂಡಿದ್ದರು.

"ಕಬ್ಸ ಸಂಕಲ್ಪ" ಶಾಲೆಯ ಕ್ರೀಡಾ ಚಾಲನೆಯನ್ನು ವಿಕಲಚೇತನ ಕರ್ನಾಟಕದ ಕ್ರಿಕೆಟ್ ತಂಡದ ನಾಯಕರಾದ "ಮಹೇಶ್ ತೋಟದ" ಹಾಗೂ "ಸಂಕಲ್ಪ ಶಾಲಾ ಮುಖ್ಯ ಕಾರ್ಯನಿರ್ವಾಹಕರಾದ ದೀಪಕ್ ಅಗರ್ವಾಲ್, ಯೋಗಿತಾ ಅಗರ್ವಾಲ್, ಆಡಳಿತ ಮಂಡಳಿಯವರು ಹಾಗು ಶಿಕ್ಷಕ ವೃಂದ ಚಾಲನೆಯಲ್ಲಿ ಪಾಲ್ಗೊಂಡಿದ್ದರು.

"ಶಾಲಾ ವಿದ್ಯಾರ್ಥಿಗಳು "ಕಬ್ಸ ಸಂಕಲ್ಪ" ವಿವಿಧ ಶಾಖೆಗಳನ್ನು ಒಳಗೊಂಡ ಸುಮಾರು 600 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಈ ಕ್ರೀಡೆಯಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ವಿಜಯಶಾಲಿ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

"ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ವಿದ್ಯಾರ್ಥಿಗಳನ್ನು ಈಗಲೇ ಕ್ರೀಡೆಯ ಬಗ್ಗೆ ಹೆಚ್ಚು ಆಸಕ್ತಿ ಮೂಡಿಸುವಲ್ಲಿ ಶಿಕ್ಷಕರು ಸಫಲರಾದರು.

"ಕಬ್ಸ ಸಂಕಲ್ಪ" ಶಾಲೆಯ ಅಧ್ಯಕ್ಷರಾದ ಅಶೋಕ ಗರ್ವಾಲ್, ಸುನಿಲ್ ಅಗರ್ವಾಲ್, ಆಡಳಿತ ಮಂಡಳಿ ಈ ಕ್ರೀಡಾಕೂಟಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.



## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಉದಯರಶ್ಮಿ ನ್ಯೂಸ್

ಕೊಲ್ಹಾರ: ತಾಲ್ಲೂಕು ಗಾಣಿಗ ಸಮಾಜ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ 2023–24 ನೇ ಸಾಲಿನ ಎಸ್ ಎಸ್ ಎಲ್ ಸಿ ಹಾಗೂ ಪಿ ಯು ಸಿ ಯಲ್ಲಿ ಶೇ 90% ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 17–12–2023 ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ .

ಗಾಣಿಗ ನೌಕರರ ಕ್ಷೇಮಾಭಿವೃದ್ಧಿ ಸಂಘದ ಕಾರ್ಯಾಲಯದಿಂದ ಅರ್ಜಿಯನ್ನು ಪಡೆದು ಅರ್ಜಿ ಸಲ್ಲಿಸಬಹುದು ಎಂದು ತಾಲೂಕು ಗಾಣಿಗ ಸಮಾಜದ ಅಧ್ಯಕ್ಷ ಪುಂಡಲೀಕ ಬಸರಕೋಡ , ಕಾರ್ಯದರ್ಶಿ ಬಸವರಾಜ ನಿಂ ತುಪ್ಪದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಈ ಕೆಳಗಿನ ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಲು ಕೋರಲಾಗಿದೆ.

ಬಸವರಾಜ ತುಪ್ಪದ– 9686047443, ಪುಂಡಲೀಕ ಬಸರಕೋಡ–9110831954, ಅಶೋಕ ಗಿಡ್ಡಪ್ಪಗೋಳ–9986330924, ಸಂಗಪ್ಪ ಹಂಡಿ–8310925280